ಸಂಪುಟ: 11 ಸಂಚಿಕೆ: 161 ಪುಟ: 4+2 ಬೆಲೆ : 3.00 ಗುರುವಾರ, ಜುಲೈ 30, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 161 Pages : 4+2 Rate : 3.00 Thursday July 30, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಪಾರದರ್ಶಕ ಹಾಗೂ ನಿಖರ ಮತದಾರರ ಪಟ್ಟಿ ಸಿದ್ಧಪಡಿಸುವ ಗುರಿ | ಊಹಾಪೋಹಗಳಿಗೆ ಕಿವಿಗೊಡದಂತೆ ಡಿಸಿ ಮನವಿ

# ಎಸ್‌ಐಆರ್‌ನಲ್ಲಿ ಗದಗ ಜಿಲ್ಲೆ ಮತ್ತೊಂದು ಮೈಲಿಗಲ್ಲು

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್-2026) ಪ್ರಕ್ರಿಯೆಯಲ್ಲಿ 9,02,947 ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸುವ ಮೂಲಕ ಶೇ.100 ಸಾಧನೆ ಮಾಡಲಾಗಿದೆ. ಇದುವರೆಗೆ 7,74,971 ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದ್ದು, ಶೇ.85.83ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತೀಯ ಚುನಾವಣಾ ಆಯೋಗದ ಪರಿಷ್ಕೃತ ವೇಳಾಪಟ್ಟಿಯಂತೆ ಬಿಎಲ್‌ಒಗಳು ಆಗಸ್ಟ್ 8ರವರೆಗೆ ಮನೆ-ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್ ವಿತರಣೆ ಹಾಗೂ ಸಂಗ್ರಹ ಕಾರ್ಯ ಮುಂದುವರಿಸಲಿದ್ದಾರೆ ಎಂದು ಹೇಳಿದರು.

ಎಸ್‌ಐಆರ್ ಪ್ರಕ್ರಿಯೆ ಕುರಿತು ಯಾವುದೇ ಊಹಾಪೋಹಗಳಿಗೆ ಕಿವಿಗೊಡದೆ, ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಮತದಾರರು ಬಿಎಲ್‌ಒಗಳಿಗೆ ಅಗತ್ಯ ದಾಖಲೆ ಹಾಗೂ ಮಾಹಿತಿಯನ್ನು ಒದಗಿಸಬೇಕು. ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ



ಪಾರದರ್ಶಕ ಹಾಗೂ ನಿಖರ ಮತದಾರರ ಪಟ್ಟಿ ಸಿದ್ಧಪಡಿಸುವುದೇ ಈ ವಿಶೇಷ ಪರಿಷ್ಕರಣೆಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲೆಯಲ್ಲಿ ವಿವಿಧ ಕಾರಣಗಳಿಂದ 1,15,655 ಎನ್ಯುಮರೇಷನ್ ಫಾರ್ಮ್‌ಗಳನ್ನು ಸಂಗ್ರಹಿಸಲು ಸಾಧ್ಯವಾಗಿಲ್ಲ. ಇದರಲ್ಲಿ 29,907 ಮರಣ ಹೊಂದಿದ ಮತದಾರರು, 66,286 ಶಾಶ್ವತವಾಗಿ ಸ್ಥಳಾಂತರಗೊಂಡವರು, 13,240 ಮಂದಿ ಈಗಾಗಲೇ ಬೇರೆಡೆ ಹೆಸರು ನೋಂದಾಯಿಸಿಕೊಂಡವರು, 5,853 ಗೈರು ಹಾಜರಿದ್ದವರು ಹಾಗೂ 369 ವಿವಿಧ ಕಾರಣಗಳಿಂದ ಫಾರ್ಮ್ ಸಲ್ಲಿಸಲು ಸಾಧ್ಯವಾಗಿಲ್ಲ ಎಂದು ಜಿಲ್ಲಾಧಿಕಾರಿ ವಿವರಿಸಿದರು. ಜಿಲ್ಲೆಯಲ್ಲಿ 967 ಮತಗಟ್ಟೆಗಳು, 967 ಬಿಎಲ್‌ಒಗಳು, 97 ಬಿಎಲ್‌ಒ ಮೇಲ್ವಿಚಾರಕರು, 967 ಮತದಾರರ ನೆರವು ಕೇಂದ್ರಗಳು ಹಾಗೂ 161 ಬಿಎಲ್‌ಒ ನೆರವು ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಗಂಗಪ್ಪ ಎಂ., ಬಸನಗೌಡ ಕೋಟೂರ, ನಂದಾ ಹಣಬರಟ್ಟಿ, ಎಸ್.ಡಿ. ಪಾಟೀಲ ಹಾಗೂ ಚುನಾವಣಾ ತಹಶೀಲ್ದಾರ ಸಂತೋಷ ಹಿರೇಮಠ ಉಪಸ್ಥಿತರಿದ್ದರು.

### ಎಸ್‌ಐಆರ್ ಪರಿಷ್ಕೃತ ವೇಳಾಪಟ್ಟಿ

1. ಆಗಸ್ಟ್ 8 ಫಾರ್ಮ್ ವಿತರಣೆ ಹಾಗೂ ಮತಗಟ್ಟೆಗಳ ಪುನರ್‌ವಿಂಗಡಣೆ ಪೂರ್ಣ
2. ಆಗಸ್ಟ್ 17 ಕರಡು ಮತದಾರರ ಪಟ್ಟಿ ಪ್ರಕಟಣೆ
3. ಆಗಸ್ಟ್ 17ರಿಂದ ಸೆಪ್ಟೆಂಬರ್ 16ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆ
4. ಅಕ್ಟೋಬರ್ 15ರೊಳಗೆ ಆಕ್ಷೇಪಣೆಗಳ ವಿಲೇವಾರಿ
5. ಅಕ್ಟೋಬರ್ 19 ಅಂತಿಮ ಮತದಾರರ ಪಟ್ಟಿ ಪ್ರಕಟಣೆ

**ಎಸ್‌ಐಆರ್ ಕುರಿತು ಊಹಾಪೋಹಗಳಿಗೆ ಕಿವಿಗೊಡದೆ, ಮತದಾರರು ಬಿಎಲ್‌ಒಗಳಿಗೆ ಅಗತ್ಯ ಮಾಹಿತಿ ಹಾಗೂ ದಾಖಲೆಗಳನ್ನು ಒದಗಿಸಬೇಕು.**

**- ಸಿ.ಎನ್. ಶ್ರೀಧರ, ಜಿಲ್ಲಾಧಿಕಾರಿ**

### ವಿಧಾನಸಭಾ ಕ್ಷೇತ್ರವಾರು ಡಿಜಿಟಲೀಕರಣ

ಶಿರಹಟ್ಟಿ : 2,00,222

ಗದಗ : 1,93,722

ರೋಣ : 2,06,733

ನರಗುಂದ : 1,74,294

## ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ವಾಹನ ಖರೀದಿಸಲು ಸಹಾಯಧನ ನೀಡುವ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಪ್ರವಾಸೋದ್ಯಮ ಇಲಾಖೆ ತಿಳಿಸಿದೆ.

2024-25 ಹಾಗೂ 2025-26ನೇ ಸಾಲಿನ ಯೋಜನೆಯಡಿ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಈ ಸೌಲಭ್ಯ ಕಲ್ಪಿಸಲಾಗಿದ್ದು, ಅರ್ಜಿದಾರರು 10ನೇ ತರಗತಿ ಉತ್ತೀರ್ಣರಾಗಿರಬೇಕು. ವಯೋಮಿತಿ 20ರಿಂದ 55 ವರ್ಷ ನಿಗದಿಪಡಿಸಲಾಗಿದೆ.ಆಗಸ್ಟ್ 1ರಿಂದ ಗದಗದ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ನಮೂನೆಗಳನ್ನು ವಿತರಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಆಗಸ್ಟ್ 17ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಎಸಿ ಕಚೇರಿ ಕಟ್ಟಡ, ಗದಗ ಅನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

ದೂರವಾಣಿ ಸಂಖ್ಯೆ 08372-233017 ಮೂಲಕವೂ ಮಾಹಿತಿ ಪಡೆಯಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ಕೂಲ್ ಚಂದನದಲ್ಲಿ ನಾಳೆ ವಿಶಿಷ್ಟ ಗುರುಪೌರ್ಣಿಮೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸಿಬಿಎಸ್‌ಇ ಸ್ಕೂಲ್ ಚಂದನದಲ್ಲಿ ಜುಲೈ 31ರಂದು ಗುರುಪೌರ್ಣಿಮೆ ಅಂಗವಾಗಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿಜಯಪುರದ ಶಾಂತಿ ಕುಟೀರದ ಶ್ರೀಕೃಷ್ಣ ಗುರೂಜಿ ಹಾಗೂ ಕೆಎಲ್‌ಇ ಸಂಸ್ಥೆಯ ನಿರ್ದೇಶಕರು, ಮಾಜಿ ಶಾಸಕ ಡಾ. ವಿ.ಐ. ಪಾಟೀಲ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಸ್ಕೂಲ್ ಚಂದನದ ವಿದ್ಯಾರ್ಥಿಗಳು ಗಣ್ಯರೊಂದಿಗೆ ಚಂದನಸ್ಪಂದನ ಸಂವಾದ ನಡೆಸಲಿದ್ದು, ವಿದ್ಯಾರ್ಥಿಗಳೊಂದಿಗೆ ವಿಚಾರ ವಿನಿಮಯ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥಾಪಕ ಟಿ. ಈಶ್ವರ ವಹಿಸಲಿದ್ದು, ವಿದ್ಯಾರ್ಥಿ ಸಂಸತ್ತಿನ ಕ್ಯಾಪ್ಟನ್, ಎಲ್ಲಾ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

## ವಸತಿನಿಲಯಕ್ಕೆ ಬಾಡಿಗೆ ಕಟ್ಟಡ ಬೇಕು

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಗದಗ-2 ನಗರಸಭೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಲಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿನಿಲಯಕ್ಕೆ 100 ವಿದ್ಯಾರ್ಥಿಗಳ ವಸತಿ ಸಾಮರ್ಥ್ಯ ಹೊಂದಿರುವ, ಎಲ್ಲಾ ಮೂಲಸೌಕರ್ಯಗಳಿರುವ ಬಾಡಿಗೆ ಕಟ್ಟಡ ಅಗತ್ಯವಿದ್ದು, ಆಸಕ್ತ ಕಟ್ಟಡ ಮಾಲೀಕರು ಆಗಸ್ಟ್ 4ರೊಳಗೆ ಇಲಾಖೆಯನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಲಯಪಾಲಕರು, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿನಿಲಯ, ಗದಗ-2 ಅಥವಾ ತಾಲೂಕು ವಿಸ್ತರಣಾಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಉಪವಿಭಾಗ ಕಚೇರಿಯನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ 8618504836 ಹಾಗೂ 9741921025ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು.

## ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಇಲಾಖೆಯ ಆತ್ಮ (ಅಖಖಅ) ಯೋಜನೆ ಅಡಿಯಲ್ಲಿ 2026-27ನೇ ಸಾಲಿನ ಜಿಲ್ಲಾ ಹಾಗೂ ತಾಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಜಿಲ್ಲೆಯ ರೈತರು ಹಾಗೂ ರೈತ ಮಹಿಳೆಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ರೈತರು ತಮ್ಮ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಿಂದ ಅರ್ಜಿ ನಮೂನೆ ಪಡೆದು, ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಆಗಸ್ಟ್ 29ರೊಳಗೆ ಸಂಬಂಧಿಸಿದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಂಬಂಧಿಸಿದ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಆತ್ಮ ಯೋಜನೆಯ ಯೋಜನಾ ನಿರ್ದೇಶಕರು ಹಾಗೂ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಉಳ್ಳಾಗಡ್ಡಿ-ಮೆಣಸಿನಕಾಯಿ ಬೆಳೆ ಮೊಳಕೆಯೇ ಬರದೆ ನಷ್ಟ

# ಕೈಕೊಟ್ಟ ಮಳೆ: ಬೆಳೆ ಹರಗಿದ ರೈತ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಿರೀಕ್ಷಿತ ಪ್ರಮಾಣದಲ್ಲಿ ಮುಂಗಾರು ಮಳೆಯಾಗದ ಪರಿಣಾಮ ತೇವಾಂಶದ ಕೊರತೆಯಿಂದ ಬೆಳೆಗಳು ನಾಶವಾಗುತ್ತಿದ್ದು, ಬೇಸತ್ತ ರೈತರು ತಾವೇ ಬೆಳೆಗಳನ್ನು ಹರಗಿ ಹಾಕುವ ಪರಿಸ್ಥಿತಿ ಎದುರಾಗಿದೆ. ನರೇಗಲ್ಲ ಹೋಬಳಿ ವ್ಯಾಪ್ತಿಯ ಅಬ್ಬಿಗೇರಿ ಗ್ರಾಮದ ರೈತ ಸಿದ್ದಪ್ಪ ಹನಮನಾಳ ಅವರು ಮಂಗಳವಾರ ತಮ್ಮ ಎರಡು ಎಕರೆ ಜಮೀನಿನಲ್ಲಿ ಬಿತ್ತನೆ ಮಾಡಿದ್ದ ಉಳ್ಳಾಗಡ್ಡಿ ಹಾಗೂ ಮೆಣಸಿನಕಾಯಿ ಬೆಳೆಯನ್ನು ಟ್ರ್ಯಾಕ್ಟರ್ ಮೂಲಕ ಹರಗಿ ನಾಶಪಡಿಸಿದರು.

ದುಬಾರಿ ಬೆಲೆಗೆ ಬೀಜ, ಗೊಬ್ಬರ ಖರೀದಿಸಿ ಉತ್ತಮ ಆದಾಯದ ನಿರೀಕ್ಷೆಯಲ್ಲಿ ಬಿತ್ತನೆ ಮಾಡಿದ್ದರೂ, ಮಳೆಯ ಕೊರತೆಯಿಂದ ಬೆಳೆ ಸಮರ್ಪಕವಾಗಿ ಮೊಳಕೆಯೊಡೆಯಲಿಲ್ಲ. ಅಲ್ಪಸ್ವಲ್ಪ ಬಂದಿದ್ದ ಬೆಳೆ ಸಹ ಬಿಸಿಗಾಳಿ ಮತ್ತು ತೇವಾಂಶದ ಕೊರತೆಯಿಂದ ಒಣಗುತ್ತಿದ್ದು, ಹಾಕಿದ ಬಂಡವಾಳವೂ ಕೈತಪ್ಪಿದಂತಾಗಿದೆ ಎಂದು ರೈತ ಸಿದ್ದಪ್ಪ ಹನಮನಾಳ ಅಳಲು ತೋಡಿಕೊಂಡರು.

**ಸಾಲ ಮಾಡಿ ಬೆಳೆ ಬೆಳೆದಿದ್ದೇವೆ. ಮಳೆ ಕೈಕೊಟ್ಟಿದ್ದರಿಂದ ಬೆಳೆ ಸಂಪೂರ್ಣ ಹಾಳಾಗಿದೆ. ಗದಗ ಜಿಲ್ಲೆಯನ್ನು ತಕ್ಷಣ ಬರಪೀಡಿತ ಎಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ನೀಡಬೇಕು.**

**- ಸಿದ್ದಪ್ಪ ಹನಮನಾಳ,** ರೈತ

ರೋಣ ತಾಲೂಕು ರೈತ ಸಂಘದ ಅಧ್ಯಕ್ಷ ಎಸ್.ಎ. ಚೌರೆಡಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಮುಂಗಾರು ಸಂಪೂರ್ಣ ವಿಫಲವಾಗಿದ್ದು, ಬಹುತೇಕ ಬೆಳೆಗಳು ನಾಶವಾಗುವ ಹಂತ ತಲುಪಿವೆ. ಜಿಲ್ಲಾಧಿಕಾರಿಗಳು ಜಮೀನುಗಳಿಗೆ ಭೇಟಿ ನೀಡಿ ವಾರ ಕಳೆದರೂ ಯಾವುದೇ ಪರಿಹಾರ ಕ್ರಮ ಕೈಗೊಂಡಿಲ್ಲ.

ರೈತರು ಪ್ರತಿದಿನ ಬೆಳೆ ನಾಶಪಡಿಸುತ್ತಿದ್ದರೂ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ. ರಾಜ್ಯ ಸರ್ಕಾರ ತಕ್ಷಣವೇ ಬೆಳೆಹಾನಿ ಪರಿಹಾರ ಹಾಗೂ ಬೆಳೆ ವಿಮೆ ಬಿಡುಗಡೆಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

## ಜಿಲ್ಲಾಡಳಿತ ಭವನದಲ್ಲಿ ಶ್ರೀ ಹಡಪದ ಅಪ್ಪಣ್ಣ ಜಯಂತಿ ಆಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಶ್ರೀ ಹಡಪದ ಅಪ್ಪಣ್ಣ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಬುಧವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು, ಹಿರಿಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಾಜದ ಗಣ್ಯರು ಉಪಸ್ಥಿತರಿದ್ದರು.

## ಕೊಟ್ಪಾ ಕಾಯ್ದೆ ಉಲ್ಲಂಘನೆ: ತಂಬಾಕು ಮಾರಾಟಗಾರರ ಮೇಲೆ ದಾಳಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಅನಧಿಕೃತವಾಗಿ ತಂಬಾಕು ಮತ್ತು ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದ ಅಂಗಡಿಗಳ ಮೇಲೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಶಿರಹಟ್ಟಿಲಕ್ಷ್ಮೇಶ್ವರ ತಾಲೂಕು ಆರೋಗ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳ ಜಂಟಿ ತಂಡ ಬುಧವಾರ ದಾಳಿ ನಡೆಸಿ, ಕೊಟ್ಪಾ (ಇಣಾಖಕಅ) ಕಾಯ್ದೆ2003ರಡಿ ₹3,200 ದಂಡ ವಿಧಿಸಿತು.

ಪಟ್ಟಣದ ಬಸ್ ನಿಲ್ದಾಣ ಸೇರಿದಂತೆ ವಿವಿಧ ಪ್ರದೇಶಗಳ ಅಂಗಡಿಗಳ ಮೇಲೆ ದಾಳಿ ನಡೆಸಿದ ತಂಡ, ಕೊಟ್ಪಾ ಕಾಯ್ದೆಯ ಸೆಕ್ಷನ್4ರಡಿ ನಿಯಮ ಉಲ್ಲಂಘಿಸಿರುವ ಪ್ರಕರಣಗಳನ್ನು ಪತ್ತೆಹಚ್ಚಿತು. ನಿಯಮಾನುಸಾರ ತಂಬಾಕು ಉತ್ಪನ್ನಗಳ ಪ್ಯಾಕೆಟ್‌ಗಳ ಮೇಲೆ ಶೇ.85ರಷ್ಟು ಆರೋಗ್ಯ ಎಚ್ಚರಿಕೆ ಸಂದೇಶ ಮುದ್ರಿಸದೇ ಇರುವುದು ಹಾಗೂ ಅಂಗಡಿಗಳಲ್ಲಿ ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಕಡ್ಡಾಯ ಸೂಚನಾ ಫಲಕ ಅಳವಡಿಸದೇ ಇರುವುದು ಕಂಡುಬಂದ ಹಿನ್ನೆಲೆಯಲ್ಲಿ ದಂಡ ವಿಧಿಸಿ ಎಚ್ಚರಿಕೆ ನೀಡಲಾಯಿತು.

ಕಾರ್ಯಾಚರಣೆಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಗೋಪಾಲ ಸುರಪುರ, ಸಿಎಚ್‌ಇಒ ಎಫ್.ಬಿ. ಹೂಗಾರ, ಹಿರಿಯ ಆರೋಗ್ಯ ನಿರೀಕ್ಷಕರಾದ ಆರ್.ವಿ. ಗುರಣ್ಣವರ, ಎಫ್.ಸಿ. ಹೊಸಮಠ, ಕಿರಿಯ ಆರೋಗ್ಯ ನಿರೀಕ್ಷಕರಾದ ಆರ್.ಕೆ. ಪುಥಳಿಕರ, ಜೆ.ಆರ್. ತಳವಾರ, ಸಾಮಾಜಿಕ ಕಾರ್ಯಕರ್ತ ಬಿ.ಸಿ. ಚಿತ್ತರಗಿ, ಪ್ರೊಬೆಷನರಿ ಪಿಎಸ್‌ಐ ಸೂರ್ಯಕಾಂತ ಎಲ್.ಜಿ. ಹಾಗೂ ಎಎಸ್‌ಐ ಸಿ.ಆರ್. ನದಾಫ್ ಭಾಗವಹಿಸಿದ್ದರು.

### ತಹಸೀಲ್ದಾರ್ ಕಚೇರಿಯಲ್ಲಿ ಶಿವಶರಣ ಹಡಪದ ಅಪ್ಪಣ್ಣ ಜಯಂತಿ

# ಹಡಪದ ಅಪ್ಪಣ್ಣ ಆದರ್ಶಗಳು ಸಮಾಜಕ್ಕೆ ದಾರಿದೀಪ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ನಿಜಸುಖಿ ಶಿವಶರಣ ಹಡಪದ ಅಪ್ಪಣ್ಣ ಅವರ ಆದರ್ಶಗಳು ಇಂದಿನ ಸಮಾಜಕ್ಕೂ ದಾರಿದೀಪವಾಗಿದ್ದು, ಅವರ ಸಮಾನತೆ ಮತ್ತು ಮಾನವೀಯ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಹೇಳಿದರು.

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಬುಧವಾರ ಹಡಪದ ಅಪ್ಪಣ್ಣ ಅವರ ಜಯಂತಿ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹನ್ನೆರಡನೇ ಶತಮಾನದ ವಚನ ಚಳುವಳಿಯ ಪ್ರಮುಖ ಶಿವಶರಣರಲ್ಲಿ ಹಡಪದ ಅಪ್ಪಣ್ಣ ಅವರು ಒಬ್ಬರಾಗಿದ್ದು, ಬಸವಣ್ಣನವರ ಸಾಮಾಜಿಕ ಕ್ರಾಂತಿಗೆ ತಮ್ಮ ಕಾರ್ಯ ಮತ್ತು ವಿಚಾರಗಳಿಂದ ಬಲ ತುಂಬಿದ ಮಹನೀಯರಾಗಿದ್ದರು ಎಂದು ಹೇಳಿದರು.

ಸಮಾಜದ ಯುವ ಮುಖಂಡ ಅಂಬರೇಶ ತೆಂಬದಮನಿ ಮಾತನಾಡಿ, ಹಡಪದ ಅಪ್ಪಣ್ಣ ಅವರು ಟಬಸವಪ್ರಿಯ ಕೂಡಲ ಚೆನ್ನಬಸವಣ್ಣ ಅಂಕಿತನಾಮದಲ್ಲಿ ಸುಮಾರು 250 ವಚನಗಳನ್ನು ರಚಿಸಿದ್ದು, ಅವರ ಪತ್ನಿ ಲಿಂಗಮ್ಮ ಅವರು ಟಅಪ್ಪಣ್ಣಪ್ರಿಯ ಚೆನ್ನಬಸವಣ್ಣ ಅಂಕಿತದಲ್ಲಿ 114 ವಚನಗಳನ್ನು ರಚಿಸುವ ಮೂಲಕ ವಚನ ಸಾಹಿತ್ಯಕ್ಕೆ ಅಪೂರ್ವ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಜಾತಿ, ವರ್ಣ, ವರ್ಗ ಮತ್ತು ಲಿಂಗಭೇದಗಳಿಂದ ಕೂಡಿದ್ದ ಸಮಾಜದಲ್ಲಿ ಸಮಾನತೆ, ಸಹಬಾಳ್ವೆ, ಪರಸ್ಪರ ಸಹಕಾರ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರತಿಪಾದಿಸಿದ ಹಡಪದ ಅಪ್ಪಣ್ಣ ಅವರ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ. ಸಮರ್ಥ ಕಾರ್ಯದರ್ಶಿ ಹೇಗಿರಬೇಕು ಎಂಬುದಕ್ಕೆ ಅವರ ಜೀವನವೇ ಮಾದರಿಯಾಗಿದೆ ಎಂದು ವಕ್ತಾರರು ಅಭಿಪ್ರಾಯಪಟ್ಟರು.




ಕಾರ್ಯಕ್ರಮದಲ್ಲಿ ತಾಲೂಕು ಅಧ್ಯಕ್ಷ ಗುಡ್ಡಪ್ಪ ಹಡಪದ, ನಗರ ಘಟಕದ ಅಧ್ಯಕ್ಷ ವಿನೋದ ಹಡಪದ, ಮಾಜಿ ಪುರಸಭೆ ಸದಸ್ಯ ಅಂಬರೇಶ ತೆಂಬದಮನಿ, ಮುತ್ತಣ್ಣ ನಾವಿ, ಮಹೇಶ್ ಹಡಪದ, ಲಕ್ಷ್ಮಣ ನಾವಿ, ಶಂಕರ ನಾವಿ, ಎನ್.ಎಚ್. ಹಡಪದ, ದುಂಡಪ್ಪ ಹಡಪದ, ನಿಂಗಪ್ಪ ಹಡಪದ, ಶಂಕರ ಹಡಪದ, ಮಲ್ಲೇಶ ಹಡಪದ, ಮಂಜಪ್ಪ ಹಡಪದ ಸೇರಿದಂತೆ ಸಮಾಜದ ಮುಖಂಡರು, ಸದಸ್ಯರು ಹಾಗೂ ತಹಸೀಲ್ದಾರ ಕಚೇರಿಯ ಸಿಬ್ಬಂದಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪಟ್ಟಣದ ಪುರಸಭೆ, ತಾಲೂಕು ಪಂಚಾಯಿತಿ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳು ಹಾಗೂ ಶಾಲಾ-ಕಾಲೇಜುಗಳಲ್ಲಿಯೂ ಶಿವಶರಣ ಹಡಪದ ಅಪ್ಪಣ್ಣ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

**ಹಡಪದ ಅಪ್ಪಣ್ಣ ಅವರ ಬದುಕು, ವಚನಗಳು ಹಾಗೂ ಸಮಾನತೆಯ ಸಂದೇಶ ಇಂದಿನ ಪೀಳಿಗೆಗೆ ದಾರಿದೀಪವಾಗಿವೆ. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯ.**

**- ಮಂಜುನಾಥ ಅಮಾಸಿ,** ಗ್ರೇಡ್-2 ತಹಸೀಲ್ದಾರ್

## ರಾಹುಲ್ ಗಾಂಧಿ ಡ್ರಗ್ಸ್ ಅಡಿಕ್ಟ್ ಎಂದಿದ್ದ ಶಾಸಕ ಯಶಪಾಲ್ ಸುವರ್ಣ ವಿರುದ್ಧ ಎಫ್‌ಐಆರ್

**ವಿಜಯಸಾಕ್ಷಿ ಸುದ್ದಿ, ಉಡುಪಿ**

ಬಿಜೆಪಿ ಪ್ರತಿಭಟನಾ ಸಭೆಯಲ್ಲಿ ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಕುರಿತು ಅವಹೇಳನಕಾರಿ ಮತ್ತು ದ್ವೇಷ ಪ್ರಚೋದಿಸುವ ಭಾಷಣ ಮಾಡಿದ್ದಾರೆ ಎಂಬ ಆರೋಪದಡಿ ಉಡುಪಿ ಶಾಸಕ ಯಶ್‌ಪಾಲ್ ಸುವರ್ಣ ವಿರುದ್ಧ ಉಡುಪಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಕುಮಾರ್ ಕೊಡವೂರು ನೀಡಿದ ದೂರಿನ ಮೇರೆಗೆ ಪೊಲೀಸರು ಎಫ್‌ಐಆರ್ ದಾಖಲಿಸಿ ತನಿಖೆ ಆರಂಭಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಹಂಪಾಪಟ್ಟಣಕ್ಕೆ ಸರ್ಕಾರಿ ಪಿಯು ಕಾಲೇಜಿಗೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕಿನ ಹಂಪಾಪಟ್ಟಣ ಗ್ರಾಮಕ್ಕೆ ಸರ್ಕಾರಿ ಪದವಿ ಪೂರ್ವ (ಪಿಯು) ಕಾಲೇಜು ಮಂಜೂರು ಮಾಡುವಂತೆ ಆಗ್ರಹಿಸಿ ಗ್ರಾಮಸ್ಥರು, ರೈತ ಸಂಘದ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪಕ್ಷಾತೀತವಾಗಿ ಹೋರಾಟ ಆರಂಭಿಸಿ ಸೋಮವಾರ ತಹಶೀಲ್ದಾರರ ಮೂಲಕ ರಾಜ್ಯ ಸರ್ಕಾರಕ್ಕೆ ಸಾಂಕೇತಿಕ ಮನವಿ ಸಲ್ಲಿಸಿದರು.

ಹೋರಾಟ ಸಮಿತಿಯ ಸಂಚಾಲಕ ಬುಡ್ಡಿ ಬಸವರಾಜ್ ಮಾತನಾಡಿ, ಹಂಪಾಪಟ್ಟಣ ಸೇರಿದಂತೆ ಸುತ್ತಮುತ್ತಲಿನ 12 ಗ್ರಾಮಗಳ ವಿದ್ಯಾರ್ಥಿಗಳು ಉನ್ನತ ಶಿಕ್ಷಣಕ್ಕಾಗಿ ದೂರದ ಊರುಗಳಿಗೆ ತೆರಳಬೇಕಾದ ಅನಿವಾರ್ಯತೆ ಎದುರಿಸುತ್ತಿದ್ದಾರೆ. ಇದರಿಂದ ಬಡ ಹಾಗೂ ರೈತ ಕುಟುಂಬಗಳ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿದೆ. ಸರ್ಕಾರ ತಕ್ಷಣವೇ ಹಂಪಾಪಟ್ಟಣದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಜೂರು ಮಾಡಿ ಗ್ರಾಮೀಣ ವಿದ್ಯಾರ್ಥಿಗಳ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಬೇಕು ಎಂದು ಒತ್ತಾಯಿಸಿದರು.

ರೈತ ಸಂಘದ ಮುಖಂಡ ಬಿ. ಕುಬೇರ ಮಾತನಾಡಿ, ರೈತ ಕುಟುಂಬಗಳ ಮಕ್ಕಳಿಗೆ ಗುಣಮಟ್ಟದ ಉನ್ನತ ಶಿಕ್ಷಣ ದೊರೆಯುವ ನಿಟ್ಟಿನಲ್ಲಿ ಸರ್ಕಾರ ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರದಲ್ಲೇ ಸರ್ಕಾರಿ ಪಿಯು ಕಾಲೇಜು ಮಂಜೂರು ಮಾಡಬೇಕು ಎಂದು ಆಗ್ರಹಿಸಿದರು.

ಯುವ ಮುಖಂಡ ಟಿ. ಕೊಟ್ರೇಶ್ ಮಾತನಾಡಿ, ಹಂಪಾಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪಕ್ಷಾತೀತವಾಗಿ ಈ ಹೋರಾಟ ಆರಂಭಿಸಲಾಗಿದೆ. ವಿದ್ಯಾರ್ಥಿಗಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಕೂಡಲೇ ಕಾಲೇಜು ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ಎನ್. ನಾಗರಾಜ್ ಮಾತನಾಡಿ, ಹಂಪಾಪಟ್ಟಣದಲ್ಲಿ ಪದವಿ ಪೂರ್ವ ಕಾಲೇಜು ಆರಂಭಿಸಲು ಅಗತ್ಯ ಮೂಲಸೌಕರ್ಯಗಳಿದ್ದು, ಕಾಲೇಜು ಮಂಜೂರಾದರೆ ಸಾವಿರಾರು ಗ್ರಾಮೀಣ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಬಳಿಕ ತಹಶೀಲ್ದಾರರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಸಿ.ಎಲ್. ಕುರ್ಮಾ, ಸಿದ್ದರ ಗಾಳಪ್ಪ, ಬಿ. ನಾಗರಾಜ್, ಪತ್ರಿ ಯಲ್ಲಪ್ಪ, ಗಾಳಮ್ಮನವರ ಹುಲುಗಪ್ಪ, ಭಜಂತ್ರಿ ಸೋಮನಾಥ್, ಜಿ. ಅಂಜಿನಪ್ಪ, ಶಿಗೇನಹಳ್ಳಿ ಬಸವರಾಜ್, ಬೆಸ್ತರು ಮಂಜುನಾಥ್, ಎಚ್.ಕೆ. ರಮೇಶ್, ತೀರ್ಥ ಪ್ರಸಾದ್, ಹಂಪಿನಕಟ್ಟಿ ಪ್ರವೀಣ್, ಉಪ್ಪಾರ್ ಹನುಮಂತಪ್ಪ, ಗೊಂದಲಿ ಪಕೀರಪ್ಪ, ಸಿದ್ದರ ಎಲ್ಲಪ್ಪ, ಎಚ್. ಅಶೋಕ್, ಕೆ. ನಜೀರ್ ಸಾಬ್, ವಡ್ಡರ ಹಾಲಪ್ಪ, ವರ್ಜೀ, ಬಿ.ಕೆ. ಬಸವರಾಜ್, ಕುಮಾರ್ ಮೊದಲಿಯಾರ್, ನಾಗೇಶ್, ಬಸವರಾಜ್, ನಿಂಗರಾಜ್ ಅಂಜಿನಿ ಸೇರಿದಂತೆ ಗ್ರಾಮಸ್ಥರು, ರೈತ ಸಂಘದ ಪದಾಧಿಕಾರಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

# ಪೊಲೀಸ್ ಕಾನ್‌ಸ್ಟೆಬಲ್ ಪರೀಕ್ಷೆ: ನಿಷೇಧಾಜ್ಞೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಸಿವಿಲ್ ಪೊಲೀಸ್ ಕಾನ್ ಸ್ಟೆಬಲ್ ಹುದ್ದೆಗಳ ನೇಮಕಾತಿ ಸಂಬಂಧ ಆಗಸ್ಟ್ 2ರಂದು ನಡೆಯಲಿರುವ ಲಿಖಿತ ಪರೀಕ್ಷೆಯ ಹಿನ್ನೆಲೆಯಲ್ಲಿ, ಗದಗ ಜಿಲ್ಲೆಯ 10 ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ತಿಳಿಸಿದ್ದಾರೆ. ಪರೀಕ್ಷಾ ದಿನ ಬೆಳಿಗ್ಗೆ 8.30ರಿಂದ ಮಧ್ಯಾಹ್ನ 1.30ರವರೆಗೆ ಪರೀಕ್ಷಾ ಕೇಂದ್ರಗಳ ಸುತ್ತ ಐದಕ್ಕಿಂತ ಹೆಚ್ಚು ಜನರು ಗುಂಪುಗೂಡುವುದು, ಅನಧಿಕೃತ ಪ್ರವೇಶ ಹಾಗೂ ಸಾರ್ವಜನಿಕ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿರುವ ಜೆರಾಕ್ಸ್ ಅಂಗಡಿಗಳು, ಬುಕ್‌ಸ್ಟಾಲ್‌ಗಳು ಹಾಗೂ ಫೋಟೋಕಾಪಿ ಕೇಂದ್ರಗಳನ್ನು ಮುಚ್ಚುವಂತೆ ಆದೇಶಿಸಲಾಗಿದೆ. ಧ್ವನಿವರ್ಧಕ ಬಳಕೆಯನ್ನೂ ನಿಷೇಧಿಸಲಾಗಿದೆ. ಪರೀಕ್ಷಾರ್ಥಿಗಳು ಹಾಗೂ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳನ್ನು ಹೊರತುಪಡಿಸಿ ಇತರರಿಗೆ ಪರೀಕ್ಷಾ ಕೇಂದ್ರ ಪ್ರವೇಶವಿರುವುದಿಲ್ಲ.

ಮೊಬೈಲ್ ಫೋನ್, ಟ್ಯಾಬ್ಲೆಟ್, ಬ್ಲೂಟೂತ್ ಸಾಧನ, ಸ್ಮಾರ್ಟ್‌ವಾಚ್, ಕ್ಯಾಲ್ಕುಲೇಟರ್, ಪೆನ್‌ಡ್ರೈವ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳು ಹಾಗೂ ನೋಟ್ಸ್, ಚಾರ್ಟ್, ಕೈಚೀಲಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ.

ಮಾಧ್ಯಮ ಪ್ರತಿನಿಧಿಗಳಿಗೆ ಪರೀಕ್ಷಾರ್ಥಿಗಳು ಆಗಮಿಸುವ ಹಾಗೂ ನಿರ್ಗಮಿಸುವ ವೇಳೆ ಮಾತ್ರ ಚಿತ್ರೀಕರಣಕ್ಕೆ ಅವಕಾಶವಿದ್ದು, ಪರೀಕ್ಷಾ ಕೊಠಡಿಗಳೊಳಗೆ ಪ್ರವೇಶಿಸಿ ಚಿತ್ರೀಕರಣ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೊರಡಿಸಿರುವ ಎಲ್ಲಾ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಜಿಲ್ಲಾಡಳಿತ ಸೂಚಿಸಿದೆ.

# ಕರ್ತವ್ಯದ ವೇಳೆ ಎಣ್ಣೆ ಪಾರ್ಟಿ!

## 6 ಪಿಡಿಒ, 2 ಕಾರ್ಯದರ್ಶಿಗಳು ಅಮಾನತು

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**


ಕರ್ತವ್ಯದ ವೇಳೆಯಲ್ಲೇ ಸಿದ್ದರಬೆಟ್ಟದ ತಪ್ಪಲಲ್ಲಿ ಮದ್ಯಪಾನ ಪಾರ್ಟಿ ನಡೆಸಿದ್ದ ಆರೋಪದ ಹಿನ್ನೆಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಹಾಗೂ ಇಬ್ಬರು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳನ್ನು ಅಮಾನತುಗೊಳಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ಆದೇಶದ ಮೇರೆಗೆ ನಡೆದ ತನಿಖೆಯಲ್ಲಿ ಆರೋಪ ಮೇಲ್ನೋಟಕ್ಕೆ ಸಾಬೀತಾದ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ಡಾ. ವಾಸಂತಿ ಅಮರ್ ಅಮಾನತು ಆದೇಶ ಹೊರಡಿಸಿದ್ದಾರೆ.

ಅಮಾನತುಗೊಂಡವರಲ್ಲಿ ಪಿಡಿಒಗಳಾದ ರವಿಶಂಕರ್, ಗಿರೀಶ್, ಹರೀಶ್, ಪ್ರಶಾಂತ್, ದಿನೇಶ್, ಚಿರಂಜೀವಿ ಹಾಗೂ ಕಾರ್ಯದರ್ಶಿಗಳಾದ ಕೆಂಪರಂಗಯ್ಯ ಮತ್ತು ಗಂಗಾಧರ್ ಸೇರಿದ್ದಾರೆ.

ಜುಲೈ 24ರಂದು ನೆಲಮಂಗಲ ತಾಲೂಕಿನ ಸಿದ್ದರಬೆಟ್ಟದ ತಪ್ಪಲಲ್ಲಿ ಕರ್ತವ್ಯದ ಸಮಯದಲ್ಲೇ ಅಧಿಕಾರಿಗಳು ಮದ್ಯದ ಪಾರ್ಟಿ ನಡೆಸಿದ್ದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಈ ಘಟನೆ ರಾಜ್ಯಾದ್ಯಂತ ಭಾರಿ ಆಕ್ರೋಶಕ್ಕೆ ಕಾರಣವಾಗಿತ್ತು.

ವಿಡಿಯೋ ವೈರಲ್ ಆದ ಬೆನ್ನಲ್ಲೇ ಸಚಿವ ಈಶ್ವರ್ ಖಂಡ್ರೆ, 24 ಗಂಟೆಗಳೊಳಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಿದ್ದರು. ತನಿಖಾ ವರದಿಯಲ್ಲಿ ಅಧಿಕಾರಿಗಳು ಕರ್ತವ್ಯದ ವೇಳೆ ಕಚೇರಿ ಬಿಟ್ಟು ಪಾರ್ಟಿಯಲ್ಲಿ ಭಾಗಿಯಾಗಿರುವುದು ದೃಢಪಟ್ಟ ಹಿನ್ನೆಲೆಯಲ್ಲಿ ಎಂಟು ಮಂದಿಯನ್ನು ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ.

# ವ್ಯಸನಮುಕ್ತ ಸಮಾಜಕ್ಕೆ ಮಹಾಂತ ಶಿವಯೋಗಿಗಳು ಆದರ್ಶ



ವ್ಯಸನಗಳು ವ್ಯಕ್ತಿಯ ಆರೋಗ್ಯವನ್ನಷ್ಟೇ ಅಲ್ಲ, ಕುಟುಂಬದ ನೆಮ್ಮದಿ, ಆರ್ಥಿಕ ಸ್ಥಿರತೆ ಹಾಗೂ ಸಮಾಜದ ಅಭಿವೃದ್ಧಿಯನ್ನೂ ಹಾಳುಮಾಡುವ ಮಾರಕ ಪಿಡುಗಾಗಿದೆ. ಮದ್ಯಪಾನ, ತಂಬಾಕು, ಗುಟ್ಕಾ ಮತ್ತು ಮಾದಕ ವಸ್ತುಗಳ ವ್ಯಸನದಿಂದ ವಿಶೇಷವಾಗಿ ಯುವಜನತೆಯ ಭವಿಷ್ಯ ಅಪಾಯದಲ್ಲಿದೆ. ಈ ದುಶ್ಚಟಗಳ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸಿ, ವ್ಯಸನಮುಕ್ತ ಹಾಗೂ ಆರೋಗ್ಯಕರ ಸಮಾಜ ನಿರ್ಮಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಆಗಸ್ಟ್ 1ರಂದು ರಾಜ್ಯಾದ್ಯಂತ ವ್ಯಸನಮುಕ್ತ ದಿನಾಚರಣೆ ಆಚರಿಸುತ್ತಿದೆ.

ಆಗಸ್ಟ್ 1ರಂದು ಜನಿಸಿದ ಮಹಾನ್ ಸಮಾಜ ಸುಧಾರಕ ಡಾ. ಮಹಾಂತ ಶಿವಯೋಗಿ ಸ್ವಾಮೀಜಿಯವರ ಜನ್ಮದಿನವನ್ನೇ ವ್ಯಸನಮುಕ್ತ ದಿನಾಚರಣೆಯಾಗಿ ಆಚರಿಸುವುದು ವಿಶೇಷ ಮಹತ್ವ ಹೊಂದಿದೆ. ತಮ್ಮ ಇಡೀ ಬದುಕನ್ನು ಸಮಾಜದ ಒಳಿತಿಗೆ ಮೀಸಲಿಟ್ಟಿದ್ದ ಅವರು, ಜನರಲ್ಲಿದ್ದ ದುಶ್ಚಟಗಳನ್ನು ನಿರ್ಮೂಲನೆ ಮಾಡಲು ವಿನೂತನ ಮಾರ್ಗವನ್ನು ಅನುಸರಿಸಿದ್ದರು.

ಜನರ ದುಶ್ಚಟಗಳನ್ನೇ ಜೋಳಿಗೆಯಲ್ಲಿ ಭಿಕ್ಷೆಯಾಗಿ ಸಂಗ್ರಹಿಸಿ ವ್ಯಸನಮುಕ್ತ ಸಮಾಜ ಕಟ್ಟಿದವರು ಡಾ. ಮಹಾಂತ ಶಿವಯೋಗಿ ಸ್ವಾಮೀಜಿಗಳು.

ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ 1930ರ ಆಗಸ್ಟ್ 1ರಂದು ಜನಿಸಿದ ಮಹಾಂತ ಶಿವಯೋಗಿಗಳು ಬಾಲ್ಯದಲ್ಲೇ ಸವದಿ ವಿರಕ್ತಮಠದ ಕಿರಿಯ ಸ್ವಾಮೀಜಿಗಳಾದರು.

ಕಾಶಿಯಲ್ಲಿ ಸಂಸ್ಕೃತ, ಹಿಂದಿ, ಯೋಗ ಹಾಗೂ ಶಾಸ್ತ್ರೀಯ ಸಂಗೀತದಲ್ಲಿ ಪರಿಣತಿ ಪಡೆದ ಅವರು, ಉತ್ತರ ಕರ್ನಾಟಕದಲ್ಲಿ ಬರಗಾಲದ ಸಂದರ್ಭದಲ್ಲಿ ನೂರಾರು ಗ್ರಾಮಗಳಲ್ಲಿ ಗಂಜಿ ಕೇಂದ್ರಗಳನ್ನು ಆರಂಭಿಸಿ ಜನಸೇವೆ ಸಲ್ಲಿಸಿದರು.

ಗೋಶಾಲೆಗಳನ್ನು ಸ್ಥಾಪಿಸಿ ಜಾನುವಾರುಗಳಿಗೂ ಮೇವು ಹಾಗೂ ನೀರಿನ ವ್ಯವಸ್ಥೆ ಕಲ್ಪಿಸಿದರು.

1970ರಲ್ಲಿ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ 19ನೇ ಪೀಠಾಧಿಪತಿಗಳಾದ ಅವರು 48 ವರ್ಷಗಳ ಕಾಲ ಅನ್ನದಾಸೋಹ, ದೇವದಾಸಿ ವಿಮೋಚನೆ, ಕಾಯಕ ಸಂಜೀವಿನಿ, ನಿಸರ್ಗ ಚಿಕಿತ್ಸೆ, ಯೋಗ ಕೇಂದ್ರಗಳ ಸ್ಥಾಪನೆ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಗಳಿಗೆ ಮುನ್ನುಡಿ ಬರೆದರು.

ಆದರೆ ಅವರ ಅತ್ಯಂತ ವಿಶಿಷ್ಟ ಕಾರ್ಯವೆಂದರೆ ʼಮಹಾಂತ ಜೋಳಿಗೆ ಅಭಿಯಾನ. ಗ್ರಾಮಗಳಿಗೆ ತೆರಳಿ ವ್ಯಸನಿಗಳ ಮನೆ ಬಾಗಿಲಿಗೆ ಹೋಗಿ ಮದ್ಯ, ತಂಬಾಕು, ಗುಟ್ಕಾ ಸೇರಿದಂತೆ ದುಶ್ಚಟಗಳ ವಸ್ತುಗಳನ್ನು ತಮ್ಮ ಜೋಳಿಗೆಯಲ್ಲಿ ಹಾಕಿಸಿಕೊಂಡು, ಮತ್ತೆ ಅವುಗಳನ್ನು ಬಳಸುವುದಿಲ್ಲ ಎಂಬ ಪ್ರತಿಜ್ಞೆ ಮಾಡಿಸುತ್ತಿದ್ದರು.

ಈ ಅಭಿಯಾನ ಕರ್ನಾಟಕಕ್ಕೆ ಮಾತ್ರ ಸೀಮಿತವಾಗದೆ ದೇಶ-ವಿದೇಶಗಳಲ್ಲಿಯೂ ಜನಜಾಗೃತಿ ಮೂಡಿಸಿತು.

ವ್ಯಸನವೆಂಬುದು ಒಬ್ಬ ವ್ಯಕ್ತಿಯ ಸಮಸ್ಯೆಯಲ್ಲ. ಅದು ಕುಟುಂಬದ ಆರ್ಥಿಕ ಸ್ಥಿತಿ, ಮಾನಸಿಕ ನೆಮ್ಮದಿ ಮತ್ತು ಸಮಾಜದ ಶಾಂತಿಯ ಮೇಲೂ ಗಂಭೀರ ಪರಿಣಾಮ ಬೀರುತ್ತದೆ. ಆದ್ದರಿಂದ ವ್ಯಸನಮುಕ್ತ ಸಮಾಜ ನಿರ್ಮಾಣದಲ್ಲಿ ಕುಟುಂಬ, ಶಾಲೆ-ಕಾಲೇಜುಗಳು, ಧಾರ್ಮಿಕ ಸಂಸ್ಥೆಗಳು, ಸ್ವಯಂಸೇವಾ ಸಂಘಟನೆಗಳು ಹಾಗೂ ಸರ್ಕಾರಿ ಇಲಾಖೆಗಳು ಒಗ್ಗಟ್ಟಿನಿಂದ ಕೆಲಸ ಮಾಡಬೇಕಾಗಿದೆ.

ಯುವಜನತೆ ದೇಶದ ಭವಿಷ್ಯದ ಶಕ್ತಿ. ಶಿಕ್ಷಣ, ಕ್ರೀಡೆ, ವಿಜ್ಞಾನ, ಕೃಷಿ, ಸಾಹಿತ್ಯ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡ ಯುವಕರು ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಿದಾಗ ಮಾತ್ರ ಸದೃಢ ರಾಷ್ಟ್ರ ನಿರ್ಮಾಣ ಸಾಧ್ಯ. ಶಾಲಾ-ಕಾಲೇಜು ಹಂತದಲ್ಲಿಯೇ ವ್ಯಸನದ ದುಷ್ಪರಿಣಾಮಗಳ ಕುರಿತು ನಿರಂತರ ಜಾಗೃತಿ ಮೂಡಿಸುವ ಅಗತ್ಯವಿದೆ.

ಆಗಸ್ಟ್ 1ರ ವ್ಯಸನಮುಕ್ತ ದಿನಾಚರಣೆ ಕೇವಲ ಒಂದು ದಿನದ ಕಾರ್ಯಕ್ರಮವಾಗದೆ, ಪ್ರತಿಯೊಬ್ಬರೂ ಜೀವನಪರ್ಯಂತ ಪಾಲಿಸಬೇಕಾದ ಸಂಕಲ್ಪವಾಗಬೇಕು.

ವ್ಯಸನಮುಕ್ತ ಜೀವನ–ಆರೋಗ್ಯಕರ ಕುಟುಂಬ–ಸುಸ್ಥಿರ ಸಮಾಜ ಎಂಬ ಸಂದೇಶವನ್ನು ಮನೆ ಮನೆಗೂ ತಲುಪಿಸುವ ಮೂಲಕ ಡಾ. ಮಹಾಂತ ಶಿವಯೋಗಿ ಸ್ವಾಮೀಜಿಯವರ ಕನಸಿನ ವ್ಯಸನಮುಕ್ತ ಕರ್ನಾಟಕ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕಾಗಿದೆ.

**-ಶ್ರೀಮತಿ ಅಂಜನಾ ರಾಘವೇಂದ್ರ ಕುಬೇರ,**
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗದಗ

## ನಶಾಮುಕ್ತ ಯುವಕರೇ ಅಭಿವೃದ್ಧಿ ಹೊಂದಿದ ಭಾರತದ ನಿಜವಾದ ಶಕ್ತಿ

# ನಶೆ ತೊರೆದು ರಾಷ್ಟ್ರ ನಿರ್ಮಾಣದತ್ತ ಹೆಜ್ಜೆಯಿಡಿ




**ವಿಜಯಸಾಕ್ಷಿ ಸುದ್ದಿ, ಗದಗ**

ಯುವಕರು ರಾಷ್ಟ್ರದ ಶಕ್ತಿ ಮತ್ತು ಭವಿಷ್ಯದ ಆಶಾಕಿರಣ. ನಶೆಯಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಿದಾಗ ಮಾತ್ರ ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣ ಸಾಧ್ಯ ಎಂದು ಮೈ ಭಾರತ್ ಕೇಂದ್ರದ ಡೆಪ್ಯೂಟಿ ಡೈರೆಕ್ಟರ್ ಲೋಕೇಶ್ ಕುಮಾರ್ ಹೇಳಿದರು.

ನಗರದ ಆದರ್ಶ ಶಿಕ್ಷಣ ಸಮಿತಿಯ ಸುವರ್ಣ ಮಹೋತ್ಸವ ಭವನದಲ್ಲಿ ಮೈ ಭಾರತ್ ಕೇಂದ್ರ, ಗದಗ ಹಾಗೂ ಎಎಸ್ಎಸ್ ಪದವಿ ವಾಣಿಜ್ಯ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ (ಎನ್ಎಸ್ಎಸ್) ಘಟಕದ ಸಹಯೋಗದಲ್ಲಿ ಆಯೋಜಿಸಿದ್ದ ʼನಶಾ ಮುಕ್ತ ಯುವವಿಕಸಿತ ಭಾರತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮದ್ಯಪಾನ, ಧೂಮಪಾನ ಹಾಗೂ ವಿವಿಧ ಮಾದಕ ವಸ್ತುಗಳ ವ್ಯಸನ ಯುವಜನರನ್ನು ಆಕರ್ಷಿಸುತ್ತಿದ್ದು, ಇದು ದೈಹಿಕ ಮತ್ತು ಮಾನಸಿಕ ಆರೋಗ್ಯದ ಜೊತೆಗೆ ಶಿಕ್ಷಣ, ಉದ್ಯೋಗ ಹಾಗೂ ಕುಟುಂಬದ ಮೇಲೂ ದುಷ್ಪರಿಣಾಮ ಬೀರುತ್ತಿದೆ.

ಯುವಕರು ಕ್ರೀಡೆ, ಯೋಗ, ವ್ಯಾಯಾಮ ಹಾಗೂ ಸಾಮಾಜಿಕ ಸೇವೆಯಂತಹ ಉತ್ತಮ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ವ್ಯಸನಗಳಿಂದ ದೂರವಿರಬೇಕು ಎಂದು ಸಲಹೆ ನೀಡಿದರು.

ನಶಾಮುಕ್ತ ಸಮಾಜ ನಿರ್ಮಾಣಕ್ಕೆ ಕುಟುಂಬ, ಶಿಕ್ಷಣ ಸಂಸ್ಥೆಗಳು, ಸರ್ಕಾರ ಹಾಗೂ ಸಮಾಜದ ಸಹಭಾಗಿತ್ವ ಅಗತ್ಯ. ಪೋಷಕರು ಮಕ್ಕಳೊಂದಿಗೆ ಉತ್ತಮ ಸಂವಹನ ಬೆಳೆಸಬೇಕು.

ಶಿಕ್ಷಕರು ಉತ್ತಮ ಮೌಲ್ಯಗಳನ್ನು ಬೆಳೆಸಲು ಪ್ರೇರೇಪಿಸಬೇಕು. ನಶಾ ಮುಕ್ತ ಯುವಬಲಿಷ್ಠ ಭಾರತ ಎಂಬ ಗುರಿಯನ್ನು ಪ್ರತಿಯೊಬ್ಬ ಯುವಕ-ಯುವತಿ ತಮ್ಮ ಜೀವನದ ಧ್ಯೇಯವಾಗಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಚಿತ್ರಕಲೆ, ಜನಪದ ಗೀತೆ, ಶಾಸ್ತ್ರೀಯ ನೃತ್ಯ, ನಾಟಕ, ರೀಲ್ಸ್, ಘೋಷವಾಕ್ಯ, ಬರವಣಿಗೆ, ಕವಿತೆ ಹಾಗೂ ಭಾಷಣ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳು ನಡೆದವು.

ಜಿಲ್ಲೆಯ ಪದವಿ ಹಾಗೂ ಪದವಿಪೂರ್ವ ಕಾಲೇಜುಗಳ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಸ್ಪರ್ಧೆಗೆ ಶುಭ ಹಾರೈಸಲಾಯಿತು.

ಕಾರ್ಯಕ್ರಮದಲ್ಲಿ ಆದರ್ಶ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಎ.ಡಿ. ಗೋಡಕಿಂಡಿ, ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ವಿ.ಟಿ. ನಾಯ್ಕರ್, ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಪ್ರೊ. ಬಿ.ಪಿ. ಜೈನರ, ಮೈ ಭಾರತ್ ಕಚೇರಿಯ ರವಿ ಹೊಂಬಾಳಿ ಹಾಗೂ ತೀರ್ಪುಗಾರರಾದ ವೀರೇಂದ್ರಗೌಡ ಪಾಟೀಲ, ಶ್ರೀನಿವಾಸ್ ಬಡಿಗೇರ್, ರೇವತಿ ಗೌಳಿ, ನಾಗರಾಜ ಸುರಳಿಕೇರಿ, ಡಾ. ವಿಟಿ ನಾಯಕ್, ಪ್ರೊ. ಪರಶುರಾಮ ಕಟ್ಟಿಮನಿ ಸೇರಿದಂತೆ ವಿವಿಧ ಕಾಲೇಜುಗಳ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> **ನಶೆಯಿಂದ ದೂರವಿರುವ ಪ್ರತಿಯೊಬ್ಬ ಯುವಕ ತನ್ನ ಕುಟುಂಬಕ್ಕೂ, ಸಮಾಜಕ್ಕೂ ಹಾಗೂ ರಾಷ್ಟ್ರಕ್ಕೂ ಅಮೂಲ್ಯ ಆಸ್ತಿಯಾಗುತ್ತಾನೆ.**
> \- **ಲೋಕೇಶ್ ಕುಮಾರ್,** ಡೆಪ್ಯೂಟಿ ಡೈರೆಕ್ಟರ್, ಮೈ ಭಾರತ್ ಕೇಂದ್ರ, ಗದಗ

# ಆಷಾಢದ ಉಡಿ ತುಂಬಿ ದೇವಿಯರ ಕೃಪೆಗೆ ಪ್ರಾರ್ಥನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದೂ ಸಂಪ್ರದಾಯದಲ್ಲಿ ಕಾರ ಹುಣ್ಣಿಮೆಯನ್ನು ಹಬ್ಬಗಳ ಮುನ್ನುಡಿಯಾಗಿ ಪರಿಗಣಿಸಲಾಗುತ್ತದೆ. ಕಾರ ಹುಣ್ಣಿಮೆ ಯಾವ ವಾರದಂದು ಬರುತ್ತದೆಯೋ, ನಾಗರ ಪಂಚಮಿ, ಗಣೇಶ ಚತುರ್ಥಿ, ವಿಜಯದಶಮಿ ಹಾಗೂ ಬಲಿಪಾಡ್ಯಮಿ ಸೇರಿದಂತೆ ಪ್ರಮುಖ ಹಬ್ಬಗಳೂ ಅದೇ ವಾರದಂದು ಆಚರಿಸಲ್ಪಡುವ ವಿಶೇಷತೆ ಇದೆ.

ಆಷಾಢ ಮಾಸದಲ್ಲಿ ದೇವಿಯರಿಗೆ ಉಡಿ ತುಂಬುವುದು, ಆರತಿ ಬೆಳಗುವುದು ಹಾಗೂ ನೈವೇದ್ಯ ಸಮರ್ಪಿಸುವುದು ಮಹಿಳೆಯರ ಸಂಪ್ರದಾಯವಾಗಿದೆ.

ಇದೇ ಹಿನ್ನೆಲೆಯಲ್ಲಿ ಎಸ್‌ಎಸ್‌ಕೆ ಶ್ರೀ ಜಗದಂಬಾ ಮಹಿಳಾ ಮಂಡಳಿ ವತಿಯಿಂದ ಈ ವರ್ಷದ ಆಷಾಢ ಮಾಸದ ಉಡಿ ತುಂಬುವ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಜುಲೈ 24ರಂದು ಬೆಳಿಗ್ಗೆ 11 ಗಂಟೆಗೆ ಮಂಡಳಿಯ ಪದಾಧಿಕಾರಿಗಳು ಹಾಗೂ ಸದಸ್ಯೆಯರು ಸರಾಫ್ ಬಜಾರ್ ಅಂಬಾಭವಾನಿ ದೇವಸ್ಥಾನದಲ್ಲಿ ಸೇರಿ ಜಗದಂಬಾ ದೇವಿ, ತುಳಜಾಭವಾನಿ ದೇವಿ, ನವದುರ್ಗಾ ದೇವಿ ಹಾಗೂ ಹುಡ್ಕೋ ಅಂಬಾಭವಾನಿ ದೇವಿ ಅವರಿಗೆ ಆಷಾಢ ಮಾಸದ ಉಡಿ ತುಂಬಿ ವಿಶೇಷ ಪೂಜೆ ಸಲ್ಲಿಸಿದರು.

ಬಳಿಕ ದೇವಸ್ಥಾನಕ್ಕೆ ಆಗಮಿಸಿದ್ದ ಮಹಿಳೆಯರಿಗೂ ಉಡಿ ತುಂಬಿ ದೇವಿಯ ಆಶೀರ್ವಾದ ಪಡೆಯುವಂತೆ ಮಾಡಿ, ಧಾರ್ಮಿಕ ಸಂಪ್ರದಾಯವನ್ನು ಅರ್ಥಪೂರ್ಣವಾಗಿ ಆಚರಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮಂಡಳಿಯ ಪದಾಧಿಕಾರಿಗಳು, ಸದಸ್ಯೆಯರು ಹಾಗೂ ಭಕ್ತರು ಭಾಗವಹಿ ಸಿದ್ದರು.

# ಶಿಕ್ಷಣವೇ ಸಮಾಜದ ಅಭಿವೃದ್ಧಿಗೆ ಅಡಿಪಾಯ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಮಾದಿಗ ಸಮಾಜದ ವತಿಯಿಂದ ಭಾನುವಾರ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಆಯೋಜಿಸಿ, ವಿವಿಧ ಪರೀಕ್ಷೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ನೇಮಿರಾಜ್ ನಾಯ್ಕ್, ಮಕ್ಕಳು ಶಿಕ್ಷಣದ ಜೊತೆಗೆ ಸಂಸ್ಕಾರವನ್ನೂ ರೂಢಿಸಿಕೊಳ್ಳಬೇಕು. ಪೋಷಕರು ತಮ್ಮ ಸುಖವನ್ನು ತ್ಯಾಗ ಮಾಡಿ ಮಕ್ಕಳ ಶಿಕ್ಷಣಕ್ಕಾಗಿ ಶ್ರಮಿಸುತ್ತಾರೆ. ವಿದ್ಯಾವಂತರಾಗಿ ಉನ್ನತ ಹುದ್ದೆ ಸೇರಿದ ಬಳಿಕ ಹೆತ್ತ ತಂದೆ-ತಾಯಿಯನ್ನು ಮರೆಯದೆ ಅವರ ಸೇವೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯ. ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಹಿರಿಯರಿಗೆ ಗೌರವ ನೀಡುವ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಗದುಗಿನ ತೋಟದಾರ್ಯ ಶಾಖಾಮಠದ ಬಾಚಿಗೊಂಡನಹಳ್ಳಿಯ ಶ್ರೀ ಶಿವ ಮಹಾಂತ ಮಹಾಸ್ವಾಮಿಗಳು ಹಾಗೂ ಕಡಲಬಾಳಿನ ಶ್ರೀ ಗವಿಸಿದ್ದೇಶ್ವರ ಶಾಖಾಮಠದ ಶ್ರೀ ಮರಿ ಶಾಂತವೀರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶಿಕ್ಷಣದ ಮೂಲಕ ಸಮಾಜದ ಪ್ರಗತಿ ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಂಗ್ರೆಸ್ ಮುಖಂಡ ಹೆಗ್ಡಾಳ್ ರಾಮಣ್ಣ ಮಾತನಾಡಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸುವ ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಇನ್ನಷ್ಟು ಸಾಧಿಸುವ ಉತ್ಸಾಹ ತುಂಬುತ್ತವೆ. ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನೂ ನೀಡಬೇಕು ಎಂದು ಹೇಳಿದರು.

ಸಮಾಜದ ಹಿರಿಯ ಬಲ್ಲಾಹುಣ್ಸೆ ರಾಮಣ್ಣ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸಮಾಜದಲ್ಲಿ ಶಿಕ್ಷಣದ ಬಗ್ಗೆ ಜಾಗೃತಿ ಹೆಚ್ಚುತ್ತಿರುವುದು ಸಂತಸದ ಸಂಗತಿ. ಪೋಷಕರು ಕಾಣುವ ಕನಸನ್ನು ನನಸಾಗಿಸುವ ಹೊಣೆ ಮಕ್ಕಳ ಮೇಲಿದೆ ಎಂದು ತಿಳಿಸಿದರು. ದಲಿತ ಸಂಘರ್ಷ ಸಮಿತಿಯ ಸಂಚಾಲಕ ದುರುಗೇಶ್ ಮಾತನಾಡಿ, ಹಲವು ದಶಕಗಳ ಹೋರಾಟದಿಂದ ದೊರೆತಿರುವ ಮೀಸಲಾತಿಯ ಸೌಲಭ್ಯವನ್ನು ಸಮಾಜದ ಮಕ್ಕಳು ಶಿಕ್ಷಣದ ಮೂಲಕ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು. ಹೂವಿನಹಡಗಲಿಯ ದಲಿತ ಮುಖಂಡ ಉಚ್ಚಂಗೆಪ್ಪ ಮಾತನಾಡಿ, ಸಮಾಜದಲ್ಲಿ ಶಿಕ್ಷಣದ ಅರಿವು ಹೆಚ್ಚುತ್ತಿರುವುದು ಆಶಾದಾಯಕ ಬೆಳವಣಿಗೆ. ಯಾವುದೇ ಕಷ್ಟ ಬಂದರೂ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಬೇಕು ಎಂದು ಪೋಷಕರಿಗೆ ಮನವಿ ಮಾಡಿದರು. ಇದೇ ವೇಳೆ ಪೂಜಪ್ಪ, ಕಂದ್ಗಲ್ ಪರಶುರಾಮ, ಆರ್‌ಟಿಒ ಪರಮೇಶಪ್ಪ ಸೇರಿದಂತೆ ಹಲವರು ಮಾತನಾಡಿ, ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಪ್ರಮುಖ ಅಸ್ತ್ರವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಉನ್ನತ ಶಿಕ್ಷಣ ಪಡೆದು ಸಮಾಜಕ್ಕೆ ಮಾದರಿಯಾಗಬೇಕು ಎಂದು ಹೇಳಿದರು. ಸಂದರ್ಭದಲ್ಲಿ ಹೆಗ್ಡಾಳ್ ಪರಶುರಾಮ, ಕಲ್ಲಳ್ಳಿ ನಾಗರಾಜ್, ಅಡವಿ ಆನಂದದೇವನಹಳ್ಳಿಯ ಪ್ರಭಾಕರ್, ಅಲಬೂರು ಮರಿಯಪ್ಪ, ಯಡ್ರಮ್ಮನಹಳ್ಳಿ ಮರಿಯಪ್ಪ, ದುರುಗಪ್ಪ ಕಿತ್ನೂರು, ಉಮೇಶ್ ಕೋಗಳಿ, ಒಂಟಿ ಮೇಘರಾಜ್ ಸೇರಿದಂತೆ ಸಮಾಜದ ಮುಖಂಡರು, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೌಶಲ್ಯವೇ ಉದ್ಯೋಗದ ಯಶಸ್ಸಿನ ಕೀಲಿಕೈ



**ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶೈಕ್ಷಣಿಕ ಜ್ಞಾನದಷ್ಟೇ ಕೌಶಲ್ಯವೂ ಅಗತ್ಯ. ಕೌಶಲ್ಯ ಹೊಂದಿದ ಯುವಜನರಿಗೇ ಉತ್ತಮ ಉದ್ಯೋಗ ಹಾಗೂ ಉಜ್ವಲ ಭವಿಷ್ಯ ಲಭಿಸುತ್ತದೆ ಎಂದು ಶ್ರೀ ಕೆ.ಎಚ್. ಪಾಟೀಲ್ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ)ಯ ಪ್ರಾಚಾರ್ಯ ಡಾ. ಮಲ್ಲೂರ ಬಸವರಾಜ ಹೇಳಿದರು.

ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಶ್ರೀ ಕೆ.ಎಚ್. ಪಾಟೀಲ್ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ವತಿಯಿಂದ ʼಸ್ಕಿಲ್ ಅಟ್ ಸ್ಕೂಲ್ ಯೋಜನೆಯಡಿ ಆಯೋಜಿಸಿದ್ದ ಪ್ರಮಾಣಪತ್ರ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲೆ ಪೂರ್ಣಿಮಾ ಹೊಸಮನಿ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಕೌಶಲ್ಯಾಧಾರಿತ ತರಬೇತಿಯನ್ನು ಪಡೆದುಕೊಂಡರೆ ಉದ್ಯೋಗಾವಕಾಶಗಳು ಹೆಚ್ಚುತ್ತವೆ. ಸ್ಕಿಲ್ ಅಟ್ ಸ್ಕೂಲ್ ಯೋಜನೆ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಮಹತ್ವದ ಕಾರ್ಯಕ್ರಮವಾಗಿದೆ ಎಂದು ತಿಳಿಸಿದರು.


ಯೋಜನೆಯ ಪ್ರಥಮ ಶಿಬಿರದಲ್ಲಿ 30 ವಿದ್ಯಾರ್ಥಿಗಳು 300 ಗಂಟೆಗಳ ಜೂನಿಯರ್ ಟೆಕ್ನೀಷಿಯನ್ ಎಲೆಕ್ಟ್ರಿಕ್ ವೆಹಿಕಲ್ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, ಅವರಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ತರಬೇತಿ ಅಧಿಕಾರಿ ಮುದಕಪ್ಪ ಕುರಿ, ಕಾರ್ಯಕ್ರಮದ ಸಂಯೋಜನಾಧಿಕಾರಿ ಸುನೀತಾ ಸಾಕೇನವರ, ತರಬೇತಿ ಬೋಧಕ ಮಹೇಶ ಸಿ.ಎಸ್. ಹಾಗೂ ಇತರರು ಉಪಸ್ಥಿತರಿದ್ದರು.

ಮಹೇಶ ಸಿ.ಎಸ್. ಸ್ವಾಗತಿಸಿದರು. ಹಿರಿಯ ಬೋಧಕ ಎಚ್.ಎ. ಕರ್ನೂಲ್ ಕಾರ್ಯಕ್ರಮ ನಿರೂಪಿಸಿದರು.

## ಡೋಣಿಯಲ್ಲಿ ಹಳ್ಳಿಯ ರಾಗ ಜನಪದ ಕಾರ್ಯಕ್ರಮ

# ಜನಪದ ಕಲೆಗಳ ಉಳಿವಿಗೆ ಎಲ್ಲರೂ ಕೈಜೋಡಿಸಿ



**ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮೀಣ ಬದುಕಿನ ಸೊಗಡನ್ನು ಬಿಂಬಿಸುವ ಜನಪದ ಕಲೆಗಳನ್ನು ಉಳಿಸಿ ಬೆಳೆಸಲು ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಅತ್ಯಂತ ಅಗತ್ಯವಾಗಿವೆ. ಕಲಾವಿದರಿಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಗ್ರಾಮೀಣ ಸಂಸ್ಕೃತಿಯ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಮಾಜಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಮಳ್ಳಪ್ಪ ಜೊಂಡಿ ಹೇಳಿದರು.

ಡಂಬಳ ಹೋಬಳಿಯ ಡೋಣಿ ಗ್ರಾಮದ ಶ್ರೀ ಬೀರಲಿಂಗೇಶ್ವರ ಜನಪದ ಕಲಾತಂಡ (ರಿ) ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಹಳ್ಳಿಯ ರಾಗ ಜನಪದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗೋಕಾಕ್‌ನ ಮಾಳಿಂಗರಾಯ ಪೂಜಾರಿ ಮಾತನಾಡಿ, ಆಧುನಿಕ ಯುಗದಲ್ಲಿ ಜನಪದ ಕಲೆಗಳು ನಿಧಾನವಾಗಿ ನಶಿಸುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕವಾಗಿರುವ ಜನಪದ ಕಲೆಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಯುವಜನರ ಮೇಲಿದೆ. ಕಲಾವಿದರಿಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಮೂಲಕ ಈ ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯಬೇಕು ಎಂದು ಕರೆ ನೀಡಿದರು.

ಖ್ಯಾತ ಜನಪದ ಕಲಾವಿದ ನಿಂಗಪ್ಪ ಗುಡ್ಡದ ಹಾಗೂ ಸಮಾಜದ ಹಿರಿಯ ಪರಸಪ್ಪ ಬೆಳ್ಳಿ ಮಾತನಾಡಿ, ಜನಪದ ಕಲೆಗಳು ನಮ್ಮ ನಾಡಿನ ಅಮೂಲ್ಯ ಸಾಂಸ್ಕೃತಿಕ ಸಂಪತ್ತಾಗಿದ್ದು, ಅವುಗಳ ಸಂರಕ್ಷಣೆಗೆ ಸರ್ಕಾರ ಮತ್ತು ಸಾರ್ವಜನಿಕರು ಹೆಚ್ಚಿನ ಸಹಕಾರ ನೀಡಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಶ್ರೀ ನೂಲಿ ಚಂದಯ್ಯ ಜನಪದ ಕಲಾತಂಡ (ಲಕ್ಕುಂಡಿ), ಶ್ರೀ ವಾಲ್ಮೀಕಿ ಕಲಾ ಸಂಘ (ವೆಂಕಟಾಪುರ), ದುರ್ಗಾದೇವಿ ಕಲಾಸಂಘ (ಡೋಣಿ) ಹಾಗೂ ಶ್ರೀ ವೀರಭದ್ರೇಶ್ವರ ವೀರಗಾಸೆ ಮೇಳ (ಕಡಕೋಳ) ಸೇರಿದಂತೆ ವಿವಿಧ ಕಲಾತಂಡಗಳು ಜನಪದ ಕಲಾ ಪ್ರದರ್ಶನ ನೀಡಿ ಪ್ರೇಕ್ಷಕರ ಮನಸೂರೆಗೊಂಡವು.

ಈ ಸಂದರ್ಭದಲ್ಲಿ ಕಾಶಪ್ಪ ಕುರಿ, ಈರಪ್ಪ ತೋಟಗಂಟಿ, ಪುತ್ರಪ್ಪ ಅಳವಂಡಿ, ಮಳ್ಳಪ್ಪ ಅಳವಂಡಿ, ಸಂತೋಷ ಸೋಗಟಿ, ಹಾಲಪ್ಪ ಕುರಿ, ಶರಣಪ್ಪ ಆಳವಿನ, ಶೇಖಪ್ಪ ಗಾಂಜಿ, ನಾನಾಸಾಬ ದೊಡ್ಡಮನಿ, ಮಾಬುಸಾಬ ಶಿರಹಟ್ಟಿ, ಯಲ್ಲಪ್ಪ ಅಣ್ಣಿಗೇರಿ, ರಾಯಪ್ಪ ತಿಮ್ಮಾಪುರ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

ನಿಂಗಪ್ಪ ಗುಡ್ಡದ ಸ್ವಾಗತಿಸಿದರು. ಎನ್.ಎಚ್. ಗುಡ್ಡದ ಕಾರ್ಯಕ್ರಮ ನಿರೂಪಿಸಿದರು.

## ಸಂಕ್ಷಿಪ್ತ ಸುದ್ದಿಗಳು

# ಅಮ್ಮ ಫೌಂಡೇಶನ್‌ನಿಂದ ಬ್ಯಾಗ್, ನೋಟ್‌ಬುಕ್, ಪೆನ್ ವಿತರಣೆ



**ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ಅಮ್ಮ ಫೌಂಡೇಶನ್ (ರಿ), ಬೆಂಗಳೂರು ವತಿಯಿಂದ ಲಕ್ಷ್ಮೇಶ್ವರ ತಾಲೂಕಿನ ಸಂಕದಾಳ ಮತ್ತು ಕೊಂಡಿಕೊಪ್ಪ ಗ್ರಾಮಗಳ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಶಾಲಾ ಬ್ಯಾಗ್, ನೋಟ್‌ಬುಕ್ ಹಾಗೂ ಪೆನ್‌ಗಳನ್ನು ವಿತರಿಸಲಾಯಿತು.

ಗದಗ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಬಸವರಾಜ ಬಳ್ಳಾರಿ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮವನ್ನು ಅಮ್ಮ ಫೌಂಡೇಶನ್ ಅಧ್ಯಕ್ಷ ಹಾಗೂ ವಕೀಲ ಮೈಲಾರಪ್ಪ ಡಿ.ಎಚ್. ಅವರ ನೇತೃತ್ವದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜ ಸೀಮಿಕೇರಿ, ಗ್ರಾಮೀಣ ಭಾಗದ ಸರ್ಕಾರಿ ಶಾಲಾ ಮಕ್ಕಳ ಶಿಕ್ಷಣಕ್ಕೆ ಅಮ್ಮ ಫೌಂಡೇಶನ್ ನೀಡುತ್ತಿರುವ ಬೆಂಬಲ ಶ್ಲಾಘನೀಯವಾಗಿದೆ. ಇಂತಹ ದಾನಿಗಳ ಸಹಕಾರದಿಂದ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಮತ್ತಷ್ಟು ಬಲ ಸಿಗಲಿದೆ ಎಂದು ಹೇಳಿದರು. ಇದೇ ವೇಳೆ ಶಾಲೆಗೆ ಡಿಜಿಟಲ್ ಸ್ಮಾರ್ಟ್ ಬೋರ್ಡ್ ಒದಗಿಸುವಂತೆ ಮನವಿ ಮಾಡಿದರು.

ಮನವಿಗೆ ತಕ್ಷಣ ಸ್ಪಂದಿಸಿದ ಮೈಲಾರಪ್ಪ ಡಿ.ಎಚ್., ತಾವು ಕಲಿತು ಬೆಳೆದ ಸರ್ಕಾರಿ ಶಾಲೆಯ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಿಸಿರುವುದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಶಾಲಾ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮ ಹಾಗೂ ಗದಗ ಜಿಲ್ಲೆಯ ಇನ್ನಷ್ಟು ಸರ್ಕಾರಿ ಶಾಲೆಗಳಲ್ಲಿ ಸಾಮಾಜಿಕ ಸೇವಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು. ಜೊತೆಗೆ ಸಂಕದಾಳ ಶಾಲೆಗೆ ಶೀಘ್ರದಲ್ಲೇ ಡಿಜಿಟಲ್ ಸ್ಮಾರ್ಟ್ ಬೋರ್ಡ್ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ನಿವೃತ್ತ ಸೈನಿಕ ಬಸವರಾಜ ಸೂರಣಗಿ, ಗ್ರಾಮದ ಹಿರಿಯ ಹಾಲಪ್ಪ ಸೂರಣಗಿ, ಎಸ್‌ಡಿಎಂಸಿ ಅಧ್ಯಕ್ಷ ರವಿ ಹರಿಜನ ಹಾಗೂ ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ದುರಗಪ್ಪ ಹರಿಜನ ಮಾತನಾಡಿ, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಅಮ್ಮ ಫೌಂಡೇಶನ್ ಕೈಗೊಂಡಿರುವ ಕಾರ್ಯವನ್ನು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ಮಂಜುನಾಥ ವಾರದ್, ತಾಲೂಕು ಪ್ರಾಥಮಿಕ ಶಿಕ್ಷಕರ ಸಂಘದ ನಿರ್ದೇಶಕ ಶರಣು ಸೋಗಿ, ಜಿಲ್ಲಾ ಉಪಾಧ್ಯಕ್ಷ ಎಂ.ಎಸ್. ಹಿರೇಮಠ್, ಶ್ರೀಮತಿ ನಂದಣ್ಣವರ್ ದಂಪತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಾಲೆಯ ಪ್ರಧಾನಗುರು ಎಸ್.ಎಸ್. ಉಪ್ಪಿನ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಅತಿಥಿ ಶಿಕ್ಷಕ ವೈ.ಎಸ್. ಪಾಟೀಲ್ ವಂದಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಣಪ್ರೇಮಿಗಳು, ಗ್ರಾಮದ ಹಿರಿಯರು, ಶಾಲಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

### ಗುರುಪೌರ್ಣಿಮೆ ಅಂಗವಾಗಿ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ ಸಂಪನ್ನ

# ಮಾನವೀಯತೆ ಸಾರಿದ ಮಹಾನ್ ಸಂತ ಸಾಯಿಬಾಬಾ



**ವಿಜಯಸಾಕ್ಷಿ ಸುದ್ದಿ, ಗದಗ**

ಗುರುಪೌರ್ಣಿಮೆ ಅಂಗವಾಗಿ ಗದಗಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗದ ವತಿಯಿಂದ ನಗರದ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಆಯೋಜಿಸಿದ್ದ 10 ದಿನಗಳ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ ಬುಧವಾರ ಮಹಾಮಂಗಲದೊಂದಿಗೆ ಸಂಪನ್ನಗೊಂಡಿತು.

ಸಮಾರೋಪ ಸಮಾರಂಭದಲ್ಲಿ ಹಿರಿಯ ಚಿಂತಕ ಹಾಗೂ ವೈದ್ಯ ಡಾ. ಎಸ್.ಬಿ. ಶೆಟ್ಟರ ಮಾತನಾಡಿ, ಸಾಯಿಬಾಬಾ ಯಾವುದೇ ಒಂದು ಧರ್ಮಕ್ಕೆ ಸೀಮಿತರಾಗಿರದೆ ಟಸಬ್ ಕಾ ಮಾಲಿಕ್ ಏಕ್ ಹೈ ಎಂಬ ಸಂದೇಶದ ಮೂಲಕ ಸರ್ವಧರ್ಮ ಸಮನ್ವಯತೆಯ ಆದರ್ಶವನ್ನು ಜಗತ್ತಿಗೆ ಸಾರಿದ ಮಹಾನ್ ಸಂತರು ಎಂದು ಹೇಳಿದರು.

ಸಾಯಿಬಾಬಾ ಬೋಧಿಸಿದ ಟಶ್ರದ್ಧೆ ಮತ್ತು ಟಸಬೂರಿ ತತ್ವಗಳು ಇಂದಿನ ಸಮಾಜಕ್ಕೂ ಅತ್ಯಂತ ಪ್ರಸ್ತುತವಾಗಿವೆ. ಭೌತಿಕ ಆಕರ್ಷಣೆ, ವ್ಯಸನಗಳಿಂದ ದೂರವಿದ್ದು ಧರ್ಮ, ಮಾನವೀಯತೆ ಹಾಗೂ ಸೇವೆಯ ಹಾದಿಯಲ್ಲಿ ನಡೆಯುವಂತೆ ಯುವಜನತೆಗೆ ಅವರು ಕರೆ ನೀಡಿದರು.

ಪ್ರವಚನ ಮಾಲಿಕೆ ಕುರಿತು ಸುಶೀಲಾ ಕೋಟಿ, ಡಾ. ಶರಣಬಸವ ವೆಂಕಟಾಪೂರ, ಸಾಲಿಮಠ, ಡಾ. ಎಸ್.ಡಿ. ಯರಗೇರಿ, ಜಗದೀಶ ಪೂಜಾರ, ರಾಮಣ್ಣ ಕಾಶಪ್ಪನವರ, ಶಕುಂತಲಾ ಹಾಸಲಕರ ಹಾಗೂ ರತ್ನಾಬಾಯಿ ಗಾರ್ಗಿ ಮಾತನಾಡಿ, ಕಳೆದ ಹತ್ತು ದಿನಗಳ ಪ್ರವಚನದಲ್ಲಿ ಸಾಯಿಬಾಬಾ ಅವರ ಜೀವನ, ಪವಾಡಗಳು ಮತ್ತು ತತ್ವ ಸಂದೇಶಗಳನ್ನು ಸರಳವಾಗಿ ನಿರೂಪಿಸಿರುವುದು ಭಕ್ತರಲ್ಲಿ ಆಧ್ಯಾತ್ಮಿಕ ಜಾಗೃತಿ ಮೂಡಿಸಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಜುಲೈ 19ರಿಂದ ಆರಂಭಗೊಂಡಿದ್ದ ಪ್ರವಚನ ಮಾಲಿಕೆಯಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದರು. ಸಮಾರೋಪ ಸಮಾರಂಭದಲ್ಲಿ ಪ್ರಸಾದ ಸೇವೆ ಸಲ್ಲಿಸಿದ ಭಕ್ತರು ಹಾಗೂ ವಿವಿಧ ಸಮಿತಿಗಳ ಸೇವಾಕರ್ತರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸತ್ಸಂಗ ಸಮಿತಿಯ ಅಧ್ಯಕ್ಷ ಮಹೇಶಗೌಡ್ರ ತಲೆಗೌಡ್ರ ಸ್ವಾಗತಿಸಿ, ಕಾರ್ಯಕ್ರಮ ಯಶಸ್ವಿಗೆ ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು. ಕಾರ್ಯದರ್ಶಿ ಅಮೃತ ವಾಲಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ಗುರುಪೌರ್ಣಿಮೆ ಮಹೋತ್ಸವದ ಸಾನ್ನಿಧ್ಯ ವಹಿಸಿ ರಂಭಾಪುರಿ ಜಗದ್ಗುರುಗಳ ಆಶೀರ್ವಚನ

# ಗುರುವಿನ ಕೃಪೆಯೇ ಬದುಕಿನ ನಿಜವಾದ ಸಂಪತ್ತು



**ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಆಧ್ಯಾತ್ಮದ ಅಮರ ಸಂಪತ್ತನ್ನು ಕರುಣಿಸಿ, ಬದುಕಿಗೆ ಸತ್ಯದ ಬೆಳಕು ತೋರಿಸುವವನೇ ನಿಜವಾದ ಗುರು ಎಂದು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಪೀಠಾಧಿಪತಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಬುಧವಾರ ರಂಭಾಪುರಿ ಪೀಠದಲ್ಲಿ ನಡೆದ ಗುರುಪೌರ್ಣಿಮೆ ಮಹೋತ್ಸವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಜಗತ್ತಿನ ಶ್ರೇಷ್ಠ ಜ್ಞಾನಿಗಳು ಮತ್ತು ಅನುಭಾವಿಗಳು ಕಂಡ ಸತ್ಯದ ಬೆಳಕನ್ನು ಸಮಾಜಕ್ಕೆ ತೋರಿಸಿ ಜನರ ಉದ್ಧಾರ ಮಾಡಿದ್ದಾರೆ. ಅಲೌಕಿಕ ಇಚ್ಛೆಗಳನ್ನು ಈಡೇರಿಸುವುದರ ಜೊತೆಗೆ ಆಧ್ಯಾತ್ಮಿಕ ಬದುಕಿನತ್ತ ಕರೆದೊಯ್ಯುವವನೇ ನಿಜವಾದ ಗುರು ಎಂದು ತಿಳಿಸಿದರು.

ಸತ್ಸಂಗವು ಮನುಷ್ಯನಲ್ಲಿರುವ ಜಾತಿ, ಮತ, ಸ್ಥಾನಮಾನಗಳ ಭೇದವನ್ನು ದೂರ ಮಾಡುತ್ತದೆ. ಟನಾನು ಎಂಬ ಅಹಂಕಾರವನ್ನು ತೊರೆದು ಭವಬಂಧನದಿಂದ ಮುಕ್ತಿಗೊಳಿಸುವ ಶಕ್ತಿ ಗುರುವಿನಲ್ಲಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವಬಂಧುತ್ವ ಮತ್ತು ಮಾನವೀಯ ಮೌಲ್ಯಗಳನ್ನು ಸಾರಿದ ಮಹಾನ್ ದಾರ್ಶನಿಕರು ಎಂದು ಅವರು ಹೇಳಿದರು.

ಗುರುಪೌರ್ಣಿಮೆ ಅಂಗವಾಗಿ ಭಕ್ತರು ಜಗದ್ಗುರುಗಳಿಗೆ ಪಾದಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು. ಇದೇ ಸಂದರ್ಭದಲ್ಲಿ ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯರು, ಹುಡುಗಿ ಸೋಮೇಶ್ವರ ಶಿವಾಚಾರ್ಯರು, ಬೇರುಗಂಡಿ ರೇಣುಕ ಮಹಾಂತ ಶಿವಾಚಾರ್ಯರು, ಕಾರ್ಜುವಳ್ಳಿ ಸದಾಶಿವ ಶಿವಾಚಾರ್ಯರು, ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ಹಂಪಸಾಗರದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು, ತಾವರೆಕೆರೆ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯರು, ಹಣ್ಣೆಮಠದ ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು ಸೇರಿದಂತೆ ಅನೇಕ ಮಠಾಧೀಶರು, ಗಣ್ಯರು ಹಾಗೂ ಭಕ್ತರು ಭಾಗವಹಿಸಿದ್ದರು.

ಹುಬ್ಬಳ್ಳಿಯ ಆರ್.ಎಂ. ಹಿರೇಮಠ ಹಾಗೂ ಅವರ ಕುಟುಂಬದವರು ಗುರುಪಾದ ಪೂಜೆ ನೆರವೇರಿಸಿ ಆಶೀರ್ವಾದ ಪಡೆದರು. ಶ್ರೀಪೀಠದ ವಿವಿಧ ದೇವತೆಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

> **ಪ್ರಾಪಂಚಿಕ ಸಂಪತ್ತು ಬದುಕನ್ನು ವೈಭವಪೂರ್ಣಗೊಳಿಸಿದರೆ, ಪಾರಮಾರ್ಥಿಕ ಸಂಪತ್ತು ಬದುಕನ್ನು ಅನುಭಾವ ಪೂರ್ಣಗೊಳಿಸುತ್ತದೆ. ಆ ಅನುಭಾವದ ಅಮೃತವನ್ನು ತುಂಬುವವನೇ ಶ್ರೀಗುರು.**
> **- ಡಾ. ವೀರಸೋಮೇಶ್ವರ ಜಗದ್ಗುರುಗಳು**

### ಅರುಣೋದಯ ವಾಯುವಿಹಾರಿಗಳ ಸಂಘದಿಂದ ಗುರುವಂದನೆ

# ಗುರುಪೌರ್ಣಿಮೆಯಂದು ಹಿರಿಯ ಶಿಕ್ಷಕರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಗುರುಪೌರ್ಣಿಮೆ ಅಂಗವಾಗಿ ನಗರದ ಜೆ.ಟಿ. ಮಹಾವಿದ್ಯಾಲಯದ ಮೈದಾನದಲ್ಲಿ ಅರುಣೋದಯ ವಾಯುವಿಹಾರಿಗಳ ವಿವಿದೋದ್ದೇಶಗಳ ಸಂಘ ವತಿಯಿಂದ ಗುರುವಂದನೆ ಹಾಗೂ ಹಿರಿಯ ಶಿಕ್ಷಕರ ಸನ್ಮಾನ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಯೋಜಿಸಲಾಯಿತು.

ಸಂಘದ ಅಧ್ಯಕ್ಷ ನಿ. ಪ್ರಾ. ಬಿ.ಆರ್. ಜಾಲಿಹಾಳ, ನಿ. ಪ್ರಾ. ಬಿ.ಬಿ. ಮಾಲಗತ್ತಿ, ಉ.ಆರ್.ಎಸ್. ಕುಂದಗೋಳ, ನಿ. ಪ್ರಾ. ಎಂ.ಸಿ. ವಗ್ಗಿ, ಡಾ. ಟಿ.ಎನ್. ಗೋಡಿ, ನಿ. ಶಿಕ್ಷಕ ಜಿ.ಬಿ. ಡೊಣ್ಣಿ ಹಾಗೂ ಉಪನ್ಯಾಸಕ ಸಂಜಯ ಸಜ್ಜನರ ಅವರನ್ನು ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಿ. ಪ್ರಾ. ಬಿ.ಆರ್. ಜಾಲಿಹಾಳ, ತಾಯಿ-ತಂದೆಯರ ನಂತರ ವಿದ್ಯಾರ್ಥಿಯ ಬದುಕನ್ನು ರೂಪಿಸುವ ಮಹತ್ತರ ಹೊಣೆಗಾರಿಕೆ ಗುರುವಿನದ್ದಾಗಿದೆ. ಗುರುವಿನ ಮಾರ್ಗದರ್ಶನವೇ ವಿದ್ಯಾರ್ಥಿಯನ್ನು ಕತ್ತಲೆಯಿಂದ ಬೆಳಕಿನೆಡೆಗೆ ಕೊಂಡೊಯ್ಯುತ್ತದೆ. ಶಿಷ್ಯರ ಯಶಸ್ಸೇ ಗುರುವಿಗೆ ಸಿಗುವ ಅತ್ಯಂತ ದೊಡ್ಡ ಗೌರವ ಎಂದು ಹೇಳಿದರು.

ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಎನ್. ಚಿಗರಿ ಮಾತನಾಡಿ, ತಮ್ಮ ಬದುಕಿನಲ್ಲಿ ಗುರುಗಳ ಮಾರ್ಗದರ್ಶನವೇ ಸನ್ಮಾರ್ಗದಲ್ಲಿ ಸಾಗಲು ಪ್ರೇರಣೆಯಾಗಿದೆ. ವಿದ್ಯಾರ್ಥಿ ಜೀವನದಿಂದ ಇಂದಿನವರೆಗೂ ಗುರುಗಳೊಂದಿಗೆ ಬೆಳೆಸಿಕೊಂಡಿರುವ ಬಾಂಧವ್ಯ ಜೀವನದ ಅಮೂಲ್ಯ ಸಂಪತ್ತು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಮೇಶ ಕುಲಕರ್ಣಿ ನಿರೂಪಣೆ ನಡೆಸಿದರು. ಮಲ್ಲಿಕಾರ್ಜುನ ಕಲಕಂಬಿ ಸ್ವಾಗತಿಸಿದರು. ಜಿ.ಬಿ. ಚನ್ನಪ್ಪಗೌಡ್ರ ವಂದಿಸಿದರು. ಈ ಸಂದರ್ಭದಲ್ಲಿ ಅಶೋಕ ವಡವಡಗಿ, ಎಂ.ಬಿ. ಕರಬಿಷ್ಟಿ, ಅಶೋಕ ಕೊಡಗಲಿ, ಜಯಣ್ಣ ಪಾಟೀಲ, ಪ್ರಮೋದ ಕುಲಕರ್ಣಿ, ಎಂ.ಎಫ್. ಡೋಣಿ, ಆರ್.ಟಿ. ನಾರಾಯಣಪುರ, ಪ್ರಭು ಮೆಡಿಕಲ್ಸ್ ಸೇರಿದಂತೆ ಸಂಘದ ಸದಸ್ಯರು ಹಾಗೂ ಹಿತೈಷಿಗಳು ಉಪಸ್ಥಿತರಿದ್ದರು. ಕೊನೆಯಲ್ಲಿ ಎಚ್.ಎನ್. ಚಿಗರಿ ಎಲ್ಲರಿಗೂ ಧನ್ಯವಾದ

> **ಸಮಾಜದಲ್ಲಿ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಶಕ್ತಿ ಗುರುವಿಗಿದೆ. ಶಿಷ್ಯರ ಸಾಧನೆಯೇ ಗುರುವಿನ ನಿಜವಾದ ಸಂಪತ್ತು.**
> **- ಬಿ.ಆರ್. ಜಾಲಿಹಾಳ,**
> ನಿವೃತ್ತ ಪ್ರಾಚಾರ್ಯರು

# ಪ್ರಾಮಾಣಿಕ ದುಡಿಮೆಯೇ ಮಾನವನ ನಿಜವಾದ ಧರ್ಮ: ರಾಜಾರಾಮ ಪವಾರ



**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಾಮಾಣಿಕ ದುಡಿಮೆಯೇ ಮಾನವನ ನಿಜವಾದ ಧರ್ಮವಾಗಿದ್ದು, ಕಾಯಕವನ್ನೇ ಶಿವಸೇವೆಯಾಗಿ ಕಂಡು ಬದುಕಿದ ಶಿವಶರಣ ಹಡಪದ ಅಪ್ಪಣ್ಣ ಅವರ ಆದರ್ಶಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಿಯಾಗಿವೆ ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಎಸ್. ಪವಾರ ಹೇಳಿದರು.

ನಗರಸಭೆ ಕಾರ್ಯಾಲಯದಲ್ಲಿ ಬುಧವಾರ ಆಯೋಜಿಸಿದ್ದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಹನ್ನೆರಡನೇ ಶತಮಾನದ ಬಸವಾದಿ ಶರಣರಲ್ಲಿ ಹಡಪದ ಅಪ್ಪಣ್ಣ ಪ್ರಮುಖರಾಗಿದ್ದು, ಅನುಭವ ಮಂಟಪದ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದರು.

ಕ್ಷೌರಿಕ ವೃತ್ತಿಯನ್ನು ಕೇವಲ ಜೀವನೋಪಾಯಕ್ಕೆ ಸೀಮಿತಗೊಳಿಸದೆ ಟಕಾಯಕವೇ ಕೈಲಾಸ ಎಂಬ ಬಸವಣ್ಣನವರ ತತ್ವವನ್ನು ಜೀವನದಲ್ಲಿ ಅಳವಡಿಸಿಕೊಂಡು ಕಾಯಕವನ್ನೇ ಶಿವಸೇವೆಯಾಗಿ ಆಚರಿಸಿದ ಮಹಾನ್ ಶರಣರಾಗಿದ್ದರು ಎಂದು ಹೇಳಿದರು.

ಹಡಪದ ಅಪ್ಪಣ್ಣ ಅವರು ರಚಿಸಿದ ವಚನಗಳು ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯುತ್ತವೆ. ಬಸವಾದಿ ಶರಣರ ಆದರ್ಶಗಳು ಮತ್ತು ತತ್ವಗಳು ಎಲ್ಲ ಕಾಲಕ್ಕೂ ಸಮಾಜಕ್ಕೆ ಪ್ರೇರಣೆಯಾಗಿವೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಲೇಖಾಧೀಕ್ಷಕ ಟಿ.ಎಚ್. ದ್ಯಾವನೂರ, ವ್ಯವಸ್ಥಾಪಕ ಪರಶುರಾಮ ಶೇರಖಾನೆ, ಶ್ರೀಶೈಲ ಸಂಕನಗೌಡ್ರ, ಮೊಹ್ಸಿನ್ ಮುಜಾವರ, ಎಂ.ಆರ್. ಪಾಟೀಲ, ರಮೇಶ ನಾಗಲೀಕರ, ಸಾವಿತ್ರಿ ಮಳ್ಳಿ, ಪುಷ್ಪಲತಾ ಕಡೇಮನಿ, ಆನಂದ ಬದಿ, ಪರಿಸರ ಅಭಿಯಂತರ ಡಿ.ಎಚ್. ಸೀತಿಮನಿ ಸೇರಿದಂತೆ ನಗರಸಭೆಯ ಹಿರಿಯ ಹಾಗೂ ಕಿರಿಯ ಸಿಬ್ಬಂದಿ ಉಪಸ್ಥಿತರಿದ್ದರು.

### ನಿರುದ್ಯೋಗಿ ಯುವಜನರು ಉದ್ಯೋಗ ವಿನಿಮಯ ಕೇಂದ್ರದಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳಲು ಕರೆ

# ಉದ್ಯೋಗದ ಅವಕಾಶ ಬಳಸಿಕೊಂಡು ಭವಿಷ್ಯ ಕಟ್ಟಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಿರುದ್ಯೋಗಿ ಯುವಕ-ಯುವತಿಯರು ಉದ್ಯೋಗ ವಿನಿಮಯ ಕೇಂದ್ರದಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಂಡು ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಉದ್ಯೋಗಾವಕಾಶಗಳ ಮಾಹಿತಿಯನ್ನು ಪಡೆದು ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಉದ್ಯೋಗ ವಿನಿಮಯ ಕಚೇರಿಯ ಕೌನ್ಸೆಲರ್ ಹಾಗೂ ತರಬೇತುದಾರ ಆನಂದ ಹೊಂಬಳ ಹೇಳಿದರು.

ನಗರದ ಕರ್ನಾಟಕ ರಾಜ್ಯ ಗಂಗಾಮತಸ್ಥ ನೌಕರರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಕಾರ್ಯಾಲಯದಲ್ಲಿ ಕರ್ನಾಟಕ ರಾಜ್ಯ ಗಂಗಾಮತಸ್ಥ ನೌಕರರ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರುಗದಗ ಜಿಲ್ಲಾ ಘಟಕ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಂಯುಕ್ತ ಆಶ್ರಯದಲ್ಲಿ ನಡೆದ ಉದ್ಯೋಗ ಮಾರ್ಗದರ್ಶಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಉದ್ಯೋಗ ನೋಂದಣಿ, ಯುವನಿಧಿ ಯೋಜನೆ, ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳು ಹಾಗೂ ಅವುಗಳಿಗೆ ಅಗತ್ಯವಿರುವ ವಿದ್ಯಾರ್ಹತೆ ಕುರಿತು ಮಾಹಿತಿ ನೀಡಿದ ಅವರು, ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲೆಗಳೊಂದಿಗೆ ಉದ್ಯೋಗ ವಿನಿಮಯ ಕಚೇರಿಗೆ ಭೇಟಿ ನೀಡಿ ನೋಂದಣಿ ಮಾಡಿಸಿಕೊಳ್ಳುವಂತೆ ತಿಳಿಸಿದರು.

ಸರ್ಕಾರಿ ಉದ್ಯೋಗವನ್ನೇ ಅವಲಂಬಿಸದೆ ಸ್ವಯಂ ಉದ್ಯೋಗ ಹಾಗೂ ಖಾಸಗಿ ವಲಯದ ಅವಕಾಶಗಳನ್ನೂ ಬಳಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಂಘದ ರಾಜ್ಯ ನಿರ್ದೇಶಕ ಹಾಗೂ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಮಾತನಾಡಿ, ಇಂತಹ ಕಾರ್ಯಾಗಾರಗಳ ಸದುಪಯೋಗವನ್ನು ನಿರುದ್ಯೋಗಿ ಯುವಜನತೆ ಪಡೆದುಕೊಳ್ಳಬೇಕು. ಸರ್ಕಾರದ ಯೋಜನೆಗಳು ಸಮುದಾಯಕ್ಕೆ ತಲುಪಿಸಲು ಸಂಘಟನೆ ನಿರಂತರವಾಗಿ ವೇದಿಕೆ ಕಲ್ಪಿಸಲಿದೆ ಎಂದು ಹೇಳಿದರು. ಜಾಬ್ ಡೆವಲಪ್‌ಮೆಂಟ್ ಆಫೀಸರ್ ರಮೇಶ ನಾಯಕ ಮಾತನಾಡಿ, ಉದ್ಯೋಗಾಕಾಂಕ್ಷಿಗಳು ಶಿಸ್ತು, ಸಮಯಪ್ರಜ್ಞೆ, ವಿನಯ ಹಾಗೂ ಸರಿಯಾದ ಮಾಹಿತಿಯೊಂದಿಗೆ ಅಧಿಕಾರಿಗಳನ್ನು ಸಂಪರ್ಕಿಸಿದರೆ ಉದ್ಯೋಗ ಪಡೆಯುವ ಅವಕಾಶ ಹೆಚ್ಚುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶರಣು ಕಟ್ಟಿಮನಿ ಮಾತನಾಡಿ, ಕೌಶಲ್ಯಾಧಾರಿತ ಕಾರ್ಯಾಗಾರಗಳು ಯುವಜನರಲ್ಲಿ ಜಾಗೃತಿ ಮೂಡಿಸಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ನೆರವಾಗುತ್ತವೆ ಎಂದರು.

ಈ ಸಂದರ್ಭದಲ್ಲಿ ಹರೀಶ ಬಾರಕೇರ, ಮಂಜುನಾಥ ಗುಡಿಸಾಗರ, ರವಿ ಗುಡಿಸಾಗರ, ಮಧುಶೇಖರ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> **ಸಮುದಾಯದ ನಿರುದ್ಯೋಗಿ ಯುವಕ-ಯುವತಿಯರು ಉದ್ಯೋಗ ವಿನಿಮಯ ಕೇಂದ್ರದಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಂಡು ವಿವಿಧ ಉದ್ಯೋಗಾವಕಾಶಗಳ ಮಾಹಿತಿಯನ್ನು ಪಡೆದು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು.**
> **- ಸಂಗಮೇಶ ಹಾದಿಮನಿ,**
> ರಾಜ್ಯ ನಿರ್ದೇಶಕರು,

# ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನ ವಿತರಣೆ




**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಆರ್ಥಿಕವಾಗಿ ಸಂಕಷ್ಟದಲ್ಲಿರುವ ವಿದ್ಯಾರ್ಥಿನಿಯರ ಉನ್ನತ ಶಿಕ್ಷಣಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ರ್‌ಯಾಪಿಡ್ ಮತ್ತು ವಿದ್ಯಾಪೋಷಕ ಸಂಸ್ಥೆಗಳ ಸಹಭಾಗಿತ್ವದಲ್ಲಿ ವಿದ್ಯಾರ್ಥಿವೇತನ ವಿತರಣಾ ಕಾರ್ಯಕ್ರಮವನ್ನು ನಗರದ ಕೆ.ಎಚ್. ಕಬ್ಬೂರ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್, ಜೆಎಸ್‌ಎಸ್ ಕಾಲೇಜು ಕ್ಯಾಂಪಸ್‌ನ ಪ್ರೇರಣಾ ಹಾಲ್ ನಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಐಐಟಿ ಪ್ರಾಧ್ಯಾಪಕ ಹಾಗೂ ಮೈಂಡ್ ವೇವ್ ಎಜುಕೇಶನ್ ಹಬ್‌ನ ಪ್ರಮುಖರಾದ ಪ್ರೊ. ಎಸ್.ಎಂ. ಶಿವಪ್ರಸಾದ್ ಹಾಗೂ ವಿದ್ಯಾಪೋಷಕ ಸಂಸ್ಥೆಯ ಸಿಇಒ ಡಾ. ಶರತ್ ಐರಣಿ ಅವರು ವಿದ್ಯಾರ್ಥಿನಿಯರನ್ನು ಉದ್ದೇಶಿಸಿ ಮಾತನಾಡಿ, ಶಿಕ್ಷಣವೇ ಉತ್ತಮ ಭವಿಷ್ಯದ ಅಡಿಪಾಯವಾಗಿದ್ದು, ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದರು.

ರ್‌ಯಾಪಿಡ್ ಸಂಸ್ಥೆಯ ವಾಣಿಶ್ರೀ ಪುರೋಹಿತ ಮಾತನಾಡಿ, ಆರ್ಥಿಕ ನೆರವು ವಿದ್ಯಾರ್ಥಿನಿಯರ ಶೈಕ್ಷಣಿಕ ಕನಸುಗಳಿಗೆ ಹೊಸ ಬಲ ನೀಡುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ 81 ವಿದ್ಯಾರ್ಥಿನಿಯರಿಗೆ ಒಟ್ಟು ₹7.77 ಲಕ್ಷ ವಿದ್ಯಾರ್ಥಿವೇತನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರಿಗೆ ಆತ್ಮವಿಶ್ವಾಸ ಮತ್ತು ವ್ಯಕ್ತಿತ್ವ ವಿಕಸನದ ಕುರಿತು ಪ್ರಸಿದ್ಧ ಪ್ರೇರಣಾದಾಯಕ ವಾಗ್ಮಿ ಹಾಗೂ ಸಂಪನ್ಮೂಲ ವ್ಯಕ್ತಿ ಪ್ರವೀಣ ಗುಡಿ ಅವರು Stop Impressing, Start Inspiring ವಿಷಯದ ಕುರಿತು ವಿಶೇಷ ಉಪನ್ಯಾಸ ಹಾಗೂ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ವಿದ್ಯಾಪೋಷಕ ಸಂಸ್ಥೆಯ ರತ್ನಾ ಹಿಪ್ಪರಗಿ, ಸಂಸ್ಥೆಯ ಸಿಬ್ಬಂದಿ, ರ್‌ಯಾಪಿಡ್ ಸಂಸ್ಥೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ದೇವರ ಸಾನ್ನಿಧ್ಯಕ್ಕೆ ಕರೆದೊಯ್ಯುವವನೇ ನಿಜವಾದ ಗುರು



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ದೇವರ ಸಾನ್ನಿಧ್ಯಕ್ಕೆ ಕರೆದೊಯ್ಯುವವನೇ ನಿಜವಾದ ಗುರು. ಗುರು ನಮ್ಮೊಳಗಿನ ಅಜ್ಞಾನದ ಕತ್ತಲೆಯನ್ನು ದೂರ ಮಾಡಿ ಸುಜ್ಞಾನದ ಹಾದಿಯಲ್ಲಿ ಮುನ್ನಡೆಸುವ ಮಹಾನ್ ವ್ಯಕ್ತಿತ್ವ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹೇಳಿದರು.

ಮುಳಗುಂದ ಸಮೀಪದ ನೀಲಗುಂದ ಗುದ್ನೇಶ್ವರಮಠದಲ್ಲಿ ಮುಳಗುಂದ ಶರಣ ಸಾಹಿತ್ಯ ಪರಿಷತ್ತು ಹಾಗೂ ಮಹಿಳಾ ಕದಳಿ ವೇದಿಕೆ ವತಿಯಿಂದ ಆಯೋಜಿಸಿದ್ದ ಗುರುಪೌರ್ಣಿಮೆ ಕಾರ್ಯಕ್ರಮದಲ್ಲಿ ಪಾದಪೂಜೆ ಸ್ವೀಕರಿಸಿ ಆಶೀರ್ವಚನ ನೀಡಿದ ಅವರು, ಅಂಧಕಾರವನ್ನು ದೂರ ಮಾಡಿ ಬೆಳಕಿನೆಡೆಗೆ ಕರೆದೊಯ್ಯುವವನೇ ಗುರು. ಪ್ರತಿಯೊಬ್ಬರ ಜೀವನದಲ್ಲೂ ಗುರುವಿನ ಮಾರ್ಗದರ್ಶನ ಅತ್ಯಗತ್ಯವಾಗಿದೆ ಎಂದು ಹೇಳಿದರು. ಮಂಜುನಾಥ ಮಟ್ಟಿ ಮಾತನಾಡಿ, ಜೀವನದ ಪ್ರತಿಯೊಂದು ಹಂತದಲ್ಲೂ ಗುರುವಿನ ಮಾರ್ಗದರ್ಶನ ಅಗತ್ಯ. ಗುರುವಿನ ಅನುಗ್ರಹವಿಲ್ಲದೆ ಯಾವುದೇ ಕಾರ್ಯ ಯಶಸ್ವಿಯಾಗುವುದಿಲ್ಲ. ಗುರುವಿನ ಆಶೀರ್ವಾದದಿಂದ ಜೀವನದಲ್ಲಿ ಎಲ್ಲವನ್ನೂ ಸಾಧಿಸಬಹುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜೇಶ್ವರಿ ಬಡ್ನಿ, ಪ್ರೇಮಾ ಬಡ್ನಿ, ಶೋಭಾ ಪಾಟೀಲ, ಸಾವಿತ್ರಿ ಲದ್ದಿ, ಮಂಜುನಾಥ ಬಿಳೆಯಲಿ, ಪರಪ್ಪ ಕರಿಗಾರ, ಎಸ್.ಎಂ. ಉಜ್ಜಣ್ಣವರ, ಗುರುಶಾಂತ ಮಟ್ಟಿ, ಮಹಾಂತೇಶ ನಪೂರಿಮಠ, ಈರಣ್ಣ ದೊಟಿಕಲ್ಲ, ಮುತ್ತಪ್ಪ ಹುಡೆದ, ಕೆ.ಎಂ. ಹೆರಕಲ್, ಅಶೋಕ ಗಡಾದ, ಮಹೇಶ ಶಿರಹಟ್ಟಿ, ಶಿವಾನಂದ ಆಪ್ತಗೇರಿ, ಮುತ್ತಪ್ಪ ಜಿಡ್ಡಿ, ಮಾರುತಿ ಜಾಧವ, ಬಸವರಾಜ ಮಟ್ಟಿ, ಚಂದ್ರು ಚಳ್ಳಣ್ಣವರ, ಗಿರೀಶ ಪಿರಂಗಿ, ಪ್ರಕಾಶ ಮದ್ದಿನ ಹಾಗೂ ಶರಣಪ್ಪ ಕಮಾಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರಾಷ್ಟ್ರೋತ್ಥಾನ ವಿದ್ಯಾಕೇಂದ್ರಕ್ಕೆ ರಾಷ್ಟ್ರಮಟ್ಟದ ಹೆಗ್ಗಳಿಕೆ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಬಾಗಲಕೋಟೆ ಜಿಲ್ಲೆಯ ತೇರದಾಳದಲ್ಲಿ ಜುಲೈ 24ರಿಂದ 26ರವರೆಗೆ ನಡೆದ ಸಿಬಿಎಸ್‌ಇ ಶಾಲೆಗಳ ಕ್ಲಸ್ಟರ್ಟಿಐಐ ವಾಲಿಬಾಲ್ ಪಂದ್ಯಾವಳಿಯಲ್ಲಿ ಹಗರಿಬೊಮ್ಮನಹಳ್ಳಿಯ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದ 14 ವರ್ಷದೊಳಗಿನ ಬಾಲಕರ ತಂಡ ಅಮೋಘ ಪ್ರದರ್ಶನ ನೀಡಿ ಪ್ರಥಮ ಸ್ಥಾನವನ್ನು ತನ್ನದಾಗಿಸಿಕೊಂಡಿದೆ.

ಈ ಗೆಲುವಿನೊಂದಿಗೆ ತಂಡವು ಹಿಮಾಚಲ ಪ್ರದೇಶದಲ್ಲಿ ನಡೆಯಲಿರುವ ಸಿಬಿಎಸ್‌ಇ ರಾಷ್ಟ್ರಮಟ್ಟದ ಕ್ರೀಡಾಕೂಟಕ್ಕೆ ಅರ್ಹತೆ ಪಡೆದಿದೆ. ಇದರೊಂದಿಗೆ ಹಗರಿಬೊಮ್ಮನಹಳ್ಳಿಯಿಂದ ಸಿಬಿಎಸ್‌ಇ ರಾಷ್ಟ್ರಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾದ ಮೊದಲ ಶಾಲೆ ಎಂಬ ಹೆಗ್ಗಳಿಕೆಗೆ ರಾಷ್ಟ್ರೋತ್ಥಾನ ವಿದ್ಯಾಕೇಂದ್ರ ಪಾತ್ರವಾಗಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು, ತರಬೇತುದಾರರು, ಶಿಕ್ಷಕರು ಹಾಗೂ ಪೋಷಕರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ. ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿಯೂ ಇದೇ ರೀತಿಯ ಉತ್ತಮ ಪ್ರದರ್ಶನ ನೀಡಿ ಶಾಲೆಯ ಜೊತೆಗೆ ಹಗರಿಬೊಮ್ಮನಹಳ್ಳಿಯ ಕೀರ್ತಿಯನ್ನು ರಾಷ್ಟ್ರಮಟ್ಟದಲ್ಲಿ ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲಿ ಎಂದರೆ.



## ಸಂಕ್ಷಿಪ್ತ ಸುದ್ದಿಗಳು

# ಕಡ್ಲಿಗಡಬ ಹುಣ್ಣಿಮೆ: ಮಲ್ಲೆಮ್ಮತಾಯಿಗೆ ವಿಶೇಷ ಪೂಜೆ



**ವಿಜಯಸಾಕ್ಷಿ ಸುದ್ದಿ, ಗದಗ**

ಕಡ್ಲಿಗಡಬ ಹುಣ್ಣಿಮೆ ಹಾಗೂ ಗುರುಪೌರ್ಣಿಮೆ ಅಂಗವಾಗಿ ನಭಾಪೂರ ಹದ್ದಿನಲ್ಲಿರುವ ಶ್ರೀ ಮಲ್ಲೆಮ್ಮತಾಯಿ ದೇವಸ್ಥಾನದಲ್ಲಿ ಬುಧವಾರ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿಭಾವದಿಂದ ನೆರವೇರಿದವು.

ಈ ಪ್ರಯುಕ್ತ ಬೆಳಿಗ್ಗೆ ಮಹಾರುದ್ರಾಭಿಷೇಕ, ಬಿಲ್ವಾರ್ಚನೆ ಹಾಗೂ ಮಹಾಮಂಗಳಾರತಿ ವಿಜೃಂಭಣೆಯಿಂದ ನಡೆಯಿತು. ಬೆಳಧಡಿ ಗ್ರಾಮದ ಕೃಷ್ಣಪ್ಪ ಶಿವಪ್ಪ ತೋಟದ ಕುಟುಂಬದವರು ಅಭಿಷೇಕ ಸೇವೆಯನ್ನು ನೆರವೇರಿಸಿ ದೇವಿಯ ಕೃಪೆಗೆ ಪಾತ್ರರಾದರು.

ಪೂಜಾ ವಿಧಿವಿಧಾನಗಳನ್ನು ಅರ್ಚಕ ಮಲ್ಲಯ್ಯಸ್ವಾಮಿ ಅಂಗಡಿ ಹಿರೇಮಠ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಗ್ರಾಮಗಳ ಭಕ್ತರು, ತಾಯಂದಿರು ಹಾಗೂ ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮಲ್ಲೆಮ್ಮತಾಯಿಯ ದರ್ಶನ ಪಡೆದು ವಿಶೇಷ ಪೂಜೆಯಲ್ಲಿ ಭಾಗವಹಿಸಿದರು.

ಪೂಜೆ ಬಳಿಕ ಭಕ್ತರಿಗೆ ಮಹಾಪ್ರಸಾದ ವಿತರಿಸಲಾಗಿದ್ದು, ತೋಟದ ಕುಟುಂಬದವರು ಪ್ರಸಾದ ಸೇವೆಯ ವ್ಯವಸ್ಥೆ ಮಾಡಿದರು. ಭಕ್ತರು ದೇವಿಯ ಆಶೀರ್ವಾದ ಪಡೆದು ಧನ್ಯತೆ ಮೆರೆದರು.

# ಆಧ್ಯಾತ್ಮವೇ ಸುಸಂಸ್ಕೃತ ಬದುಕಿನ ಅಡಿಗಲ್ಲು



**ವಿಜಯಸಾಕ್ಷಿ ಸುದ್ದಿ, ಗದಗ**

ಆಧುನಿಕತೆಯ ಭರಾಟೆಯಲ್ಲಿ ಯುವಜನತೆ ಆಡಂಬರ, ಫ್ಯಾಷನ್ ಹಾಗೂ ಮೊಬೈಲ್ ವ್ಯಸನದತ್ತ ಹೆಚ್ಚು ಆಕರ್ಷಿತರಾಗುತ್ತಿದ್ದು, ಆಧ್ಯಾತ್ಮವೇ ಜೀವನಕ್ಕೆ ಸಂಸ್ಕಾರ, ಶಿಸ್ತು ಮತ್ತು ನೆಮ್ಮದಿ ನೀಡುವ ಶಕ್ತಿಯಾಗಿದೆ ಎಂದು ಪ್ರೊ. ಶ್ರೀಶೈಲ ಬಡಿಗೇರ ಹೇಳಿದರು.

ನಗರದ ಮುನ್ಸಿಪಲ್ ಹೈಸ್ಕೂಲ್ ಸಮೀಪದ ಸೌಹಾರ್ದ ಮಹಾಮನೆಯಲ್ಲಿ ಶ್ರೀ ಗುರು ಮೃತ್ಯುಂಜಯ ಸೇವಾ ಸಮಿತಿ ಏರ್ಪಡಿಸಿದ್ದ ಆಧ್ಯಾತ್ಮ ಚಿಂತನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಯುವಜನತೆ ಆಧ್ಯಾತ್ಮಿಕ ಮೌಲ್ಯಗಳಿಂದ ದೂರ ಸರಿಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ಗುರುಹಿರಿಯರನ್ನು ಗೌರವಿಸುವ ಸಂಸ್ಕಾರ ಕ್ಷೀಣಿಸುತ್ತಿದ್ದು, ಮೊಬೈಲ್ ಬಳಕೆಯ ಅತಿರೇಕ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಈ ಬಗ್ಗೆ ಪಾಲಕರು ಹೆಚ್ಚು ಜಾಗರೂಕರಾಗಬೇಕೆಂದು ಸಲಹೆ ನೀಡಿದರು.

ಸೌಹಾರ್ದ ಮಹಾಮನೆ ಅಧ್ಯಕ್ಷ ಐ.ಕೆ. ಕಮ್ಮಾರ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಎದುರಾಗುವ ಸವಾಲುಗಳ ಬಗ್ಗೆ ಎಚ್ಚರಿಕೆ ವಹಿಸುವುದರ ಜೊತೆಗೆ ಗುರುಹಿರಿಯರಿಗೆ ಗೌರವ ನೀಡುವ ಗುಣ ಬೆಳೆಸಿಕೊಳ್ಳಬೇಕು. ಜೀವನದ ಸಾಧಕ-ಬಾಧಕಗಳನ್ನು ಅರಿತುಕೊಂಡಾಗ ಮಾತ್ರ ಗುರಿ ಸಾಧನೆ ಸಾಧ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೃತ್ಯುಂಜಯ ಹಟ್ಟಿ, ಮಣಕವಾಡದ ಶ್ರೀ ಗುರುಮೃತ್ಯುಂಜಯ ಅಪ್ಪಗಳ ಜೀವನ, ತತ್ವಗಳು ಹಾಗೂ ಪವಾಡಗಳ ಕುರಿತು ಮಾತನಾಡಿ, ಮಹನೀಯರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಬದುಕು ಸಾರ್ಥಕವಾಗುತ್ತದೆ ಎಂದು ಹೇಳಿದರು. ವಿದ್ಯಾರ್ಥಿಗಳು ಸದಾ ಸನ್ಮಾರ್ಗದಲ್ಲಿ ಸಾಗುವಂತೆ ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕೃಷ್ಣ ಸಣ್ಣತಮ್ಮನವರ ಸ್ವಾಗತಿಸಿ ನಿರೂಪಣೆ ನಡೆಸಿ ವಂದಿಸಿದರು. ರಾಯಪ್ಪಜ್ಜ ನಾಗನೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗುರುಪೌರ್ಣಿಮೆ: ಪ್ರೊ. ಎಸ್. ಎಸ್. ಪಟ್ಟಣಶೆಟ್ಟರ್‌ಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಗುರುಪೌರ್ಣಿಮೆ ಅಂಗವಾಗಿ ಶಿಕ್ಷಣ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸುತ್ತಿರುವ ಶಿಕ್ಷಣ ತಜ್ಞರು ಹಾಗೂ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ್ ಅವರನ್ನು ಮಂಡಲಗಿರಿಯ ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ) ಸಿಬ್ಬಂದಿ ವರ್ಗವು ಆತ್ಮೀಯವಾಗಿ ಸನ್ಮಾನಿಸಿ ಗೌರವ ಸಲ್ಲಿಸಿತು.

ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ್ ಅವರು ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಅಮೂಲ್ಯ ಸೇವೆ, ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವಲ್ಲಿ ವಹಿಸಿರುವ ಪಾತ್ರ ಹಾಗೂ ವಿದ್ಯಾರ್ಥಿ ಸ್ನೇಹಿ ಕಾರ್ಯಗಳನ್ನು ಸ್ಮರಿಸಿ ಸಿಬ್ಬಂದಿ ವರ್ಗ ಅಭಿನಂದನೆ ಸಲ್ಲಿಸಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಸಿಬ್ಬಂದಿ ವರ್ಗದವರು ಪ್ರೊ. ಎಸ್. ಎಸ್. ಪಟ್ಟಣಶೆಟ್ಟರ್ ಅವರಿಗೆ ಪುಷ್ಪಗುಚ್ಛ ನೀಡಿ ಶಾಲು ಹೊದಿಸಿ ಸನ್ಮಾನಿಸಿ, ಅವರ ಮಾರ್ಗದರ್ಶನ ಮುಂದೆಯೂ ದೊರೆಯಲಿ ಎಂದು ಹಾರೈಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಸಿಬ್ಬಂದಿ ಹಾಗೂ ಗಣ್ಯರು ಉಪಸ್ಥಿತರಿದ್ದರು.

## 93 ಕಿ.ಮೀ. ಕಾಮಗಾರಿ ಶೀಘ್ರ ಆರಂಭಕ್ಕೆ ಶಾಸಕ ಕೃಷ್ಣ ನಾಯಕರಿಗೆ ಮನವಿ

# ಗದಗ-ಹರಪನಹಳ್ಳಿ ರೈಲು ಮಾರ್ಗಕ್ಕೆ ವೇಗ ನೀಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ದಶಕಗಳಿಂದ ನಿರೀಕ್ಷೆಯಲ್ಲಿರುವ ಗದಗ-ಹರಪನಹಳ್ಳಿ ನೂತನ ರೈಲು ಮಾರ್ಗದ ಕಾಮಗಾರಿಯನ್ನು ತ್ವರಿತವಾಗಿ ಆರಂಭಿಸಿ ಪೂರ್ಣಗೊಳಿಸಲು ಕೇಂದ್ರ ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ, ಹೂವಿನಹಡಗಲಿ ಶಾಸಕ ಕೃಷ್ಣನಾಯಕ ಅವರಿಗೆ ಗದಗ ಜಿಲ್ಲಾ ವಿಕಾಸ ವೇದಿಕೆ ವತಿಯಿಂದ ಮನವಿ ಸಲ್ಲಿಸಲಾಯಿತು.

ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ನೇತೃತ್ವದ ನಿಯೋಗ ಮನವಿ ಸಲ್ಲಿಸಿ, ಈ ಯೋಜನೆಯು ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿದ್ದು, ರೈತರು, ವ್ಯಾಪಾರಸ್ಥರು, ಉದ್ಯಮಿಗಳು, ವಿದ್ಯಾರ್ಥಿಗಳು ಹಾಗೂ ಉದ್ಯೋಗಿಗಳಿಗೆ ಬಹಳ ಅನುಕೂಲವಾಗಲಿದೆ ಎಂದು ತಿಳಿಸಿತು.



93 ಕಿಲೋಮೀಟರ್ ಉದ್ದದ ಈ ನೂತನ ರೈಲು ಮಾರ್ಗ ಪೂರ್ಣಗೊಂಡರೆ ಗದಗ ಜಂಕ್ಷನ್ ಮೂಲಕ ವಿಜಯಪುರ ಹಾಗೂ ಮಹಾರಾಷ್ಟ್ರದೊಂದಿಗೆ ಸಂಪರ್ಕ ವಿಸ್ತರಿಸುವುದರ ಜೊತೆಗೆ, ಹೂವಿನಹಡಗಲಿಹರಪನಹಳ್ಳಿ ಭಾಗಕ್ಕೆ ಬೆಂಗಳೂರು, ಮೈಸೂರು ಮತ್ತು ಚೆನ್ನೈ ಮಾರ್ಗಗಳ ಸಂಪರ್ಕವೂ ಸುಲಭವಾಗಲಿದೆ. ಹಿಂದುಳಿದ ಪ್ರದೇಶದ ಜನರಿಗೆ ಇದು ಅಭಿವೃದ್ಧಿಯ ಹೊಸ ಅಧ್ಯಾಯವಾಗಲಿದ್ದು, ಸಂಚಾರ ಮತ್ತು ವ್ಯಾಪಾರ ಚಟುವಟಿಕೆಗಳಿಗೆ ಮಹತ್ತರ ಉತ್ತೇಜನ ದೊರೆಯಲಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ನೀವು ಆಡಳಿತ ಪಕ್ಷದ ಶಾಸಕರಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಹಾಗೂ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಅವರ ಗಮನಕ್ಕೆ ಈ ವಿಷಯವನ್ನು ತಂದು, ಕಾಮಗಾರಿ ಶೀಘ್ರ ಆರಂಭವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ.

**ಗದಗಹರಪನಹಳ್ಳಿ ರೈಲು ಮಾರ್ಗ ಈ ಭಾಗದ ಅಭಿವೃದ್ಧಿಗೆ ಹೊಸ ಅಧ್ಯಾಯ ಬರೆಯಲಿದೆ. ಕಾಮಗಾರಿ ವಿಳಂಬವಾಗದಂತೆ ಕೇಂದ್ರ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು.**

**- ವಿಶ್ವನಾಥ ಖಾನಾಪೂರ,**
ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

ಈ ಯೋಜನೆಯು ಮಾಜಿ ಉಪಮುಖ್ಯಮಂತ್ರಿ ಎಂ.ಪಿ. ಪ್ರಕಾಶ ಅವರ ಕನಸಿನ ಯೋಜನೆಯಾಗಿದ್ದು, ಅದನ್ನು ಸಾಕಾರಗೊಳಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅಗತ್ಯ ಆದ್ಯತೆ ನೀಡಬೇಕು ಎಂದು ವೇದಿಕೆ ಒತ್ತಾಯಿಸಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ವೀರಭದ್ರಪ್ಪ ಕಬ್ಬಿಣದ, ಸಿದ್ದಪ್ಪ ಜರತಕನಿ, ವೆಂಕಟೇಶ ಕಬಾಡಿ, ರಜಾಕ್ ನೂರಭಾಷಾ, ನಾಗರಾಜ ಹಂದಿಗೋಳ, ರಫೀಕ್ ಕಿತ್ತೂರ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ಗುರುಕೃಪೆಯೇ ಬದುಕಿನ ಸಾಧನೆಗೆ ಭದ್ರ ಬುನಾದಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗುರುಪೌರ್ಣಿಮೆ ಅಂಗವಾಗಿ ಪಟ್ಟಣದ ಮುಕ್ತಿಮಂದಿರ ಕ್ಷೇತ್ರದಲ್ಲಿ ಲಿಂಗೈಕ ಶ್ರೀ ಶ್ರೀ ಶ್ರೀ 1008 ವೀರ ಗಂಗಾಧರ ಜಗದ್ಗುರುಗಳ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಿಭಾವದಿಂದ ಆಚರಿಸಲಾಯಿತು. ಬಳಿಕ ಭಕ್ತರು ಶ್ರೀ ಷ.ಬ್ರ. ವಿಮಲರೇಣುಕ ವೀರ ಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಶ್ರೀಗಳು, ಗುರುಪೌರ್ಣಿಮೆ ಭಾರತೀಯ ಸಂಸ್ಕೃತಿಯ ಅಮೂಲ್ಯ ಪರಂಪರೆಯಾಗಿದ್ದು, ಗುರುಗಳ ಬಗ್ಗೆ ಕೃತಜ್ಞತೆ, ವಿನಯ ಹಾಗೂ ಜ್ಞಾನದ ಮಹತ್ವವನ್ನು ಸಾರುವ ಪವಿತ್ರ ದಿನವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿರ್ಮಲಾದೇವಿ ವೀರಣ್ಣ ಪವಾಡದ, ಲಾವಣ್ಯ ಅನ್ನದಾನೇಶ್ವರ ಪವಾಡದ, ಲಕ್ಷ್ಮೀ ವೀರಸೋಮೇಶ್ವರ ಪವಾಡದ, ಶಿವಯೋಗರಾಜ, ವಿಜಯ ವೀಣಾ, ನಮ್ರತಾ, ನಂದೀಶ್ವರ ಸೇರಿದಂತೆ ಅನೇಕ ಭಕ್ತರು ಭಾಗವಹಿಸಿದ್ದರು.

# ಹಡಪದ ಅಪ್ಪಣ್ಣ ಜಯಂತಿ ಆಚರಣೆ



**ವಿಜಯಸಾಕ್ಷಿ ಸುದ್ದಿ, ಶಿರೋಳ**

ಶ್ರೀ ನಿಜಸುಖಿ ಶಿವಶರಣ ಹಡಪದ ಅಪ್ಪಣ್ಣ ಅವರ 192ನೇ ಜಯಂತ್ಯುತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಶಿವಶರಣ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಅವರ ಕಾಯಕನಿಷ್ಠೆ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಕರೆ ನೀಡಲಾಯಿತು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಬಸವರಾಜ ಹಡಪದ, ಅಧ್ಯಕ್ಷ ಸುರೇಶ್ ಹಡಪದ, ಉಪಾಧ್ಯಕ್ಷ ರಮೇಶ್ ಹಡಪದ, ಕಾರ್ಯದರ್ಶಿ ಫಕೀರೇಶ ಹಡಪದ, ಸಹಕಾರ್ಯದರ್ಶಿ ಬಸವರಾಜ ಹಡಪದ ಸೇರಿದಂತೆ ರಮೇಶ್ ಹಡಪದ, ಲಕ್ಷ್ಮಣ ಹಡಪದ, ಶಂಕ್ರಪ್ಪ ಹಡಪದ, ಶರಣಪ್ಪ, ಸಚಿನ್, ಸಿದ್ದು, ಬಸವರಾಜ ಹೊಣಕೇರಿ, ಮಲ್ಲಪ್ಪ, ಪರಶುರಾಮ ಶಿರೋಳಗ ಹಾಗೂ ಸಮಾಜದ ಗುರುಹಿರಿಯರು, ಗ್ರಾಮಸ್ಥರು ಮತ್ತು ಸುತ್ತಮುತ್ತಲಿನ ಭಾಗದ ಮುಖಂಡರು ಉಪಸ್ಥಿತರಿದ್ದರು.

## ಸಾಯಿ ಮಂದಿರದಲ್ಲಿ ನೂತನ ಸಾಯಿ ಪ್ರಸಾದ ನಿಲಯ, ವೆಬ್‌ಸೈಟ್ ಹಾಗೂ ಗ್ರಂಥ ಲೋಕಾರ್ಪಣೆ

# ಸಾಯಿಬಾಬಾ ತತ್ವಗಳೇ ಬದುಕಿನ ನಿಜವಾದ ಬೆಳಕು



**ವಿಜಯಸಾಕ್ಷಿ ಸುದ್ದಿ, ಗದಗ**

ಶಿರಡಿ ಸಾಯಿಬಾಬಾ ಅವರು ಮಾನವೀಯತೆ, ಭಕ್ತಿ ಮತ್ತು ಆದರ್ಶ ಜೀವನದ ಸಂದೇಶಗಳನ್ನು ನೀಡಿ ಮನುಕುಲವನ್ನು ಉದ್ಧರಿಸಿದ ಮಹಾನ್ ದೇವಮಾನವರಾಗಿದ್ದಾರೆ. ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಬದುಕು ಸಾರ್ಥಕವಾಗುತ್ತದೆ ಎಂದು ಬಳಗಾನೂರಿನ ಪೂಜ್ಯ ಶಿವಶಾಂತವೀರ ಶರಣರು ಹೇಳಿದರು.

ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ನಗರದ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಸೋಮವಾರ ನಡೆದ ನೂತನ ಶ್ರೀ ಸಾಯಿ ಪ್ರಸಾದ ನಿಲಯ, ವೆಬ್‌ಸೈಟ್ ಹಾಗೂ ಡಾ. ಸಂಗಮನಾಥ ಶೆಟ್ಟರ ಕನ್ನಡಕ್ಕೆ ಅನುವಾದಿಸಿದ ಶ್ರೀ ಶಿರಡಿ ಬಾಬಾ ಮಹಾತ್ಮೆಸಂಕಲ್ಪ ಸಿದ್ಧಿ ವ್ರತ ಗ್ರಂಥ ಲೋಕಾರ್ಪಣೆ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಸಾಯಿಬಾಬಾ ಅವರ ಉದ್ದೇಶ ಸಾಮಾನ್ಯ ವ್ಯಕ್ತಿಯನ್ನು ಆದರ್ಶ ವ್ಯಕ್ತಿಯನ್ನಾಗಿ ರೂಪಿಸುವುದಾಗಿತ್ತು. ಜ್ಞಾನ, ಭಕ್ತಿ, ಸ್ಮರಣೆ ಹಾಗೂ ಜನೋಪಯೋಗಿ ಕಾರ್ಯಗಳ ಮೂಲಕ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕೆಂಬ ಸಂದೇಶವನ್ನು ಅವರು ಸಾರಿದರು. ಸುಖ-ದುಃಖಗಳು ದೇಹಕ್ಕೆ ಮಾತ್ರ ಸಂಬಂಧಿಸಿದ್ದು, ಆತ್ಮ ಸದಾ ಚೈತನ್ಯಸ್ವರೂಪಿಯಾಗಿರುತ್ತದೆ. ಆತ್ಮಚಿಂತನೆಯ ಮೂಲಕ ಬದುಕಿನಲ್ಲಿ ನೆಮ್ಮದಿ ಹಾಗೂ ಆತ್ಮವಿಕಾಸ ಸಾಧ್ಯ ಎಂದು ಹೇಳಿದರು.

ಗದಗಿನ ಸಾಯಿಬಾಬಾ ಮಂದಿರ ಜ್ಞಾನ ದಾಸೋಹ, ಭಕ್ತಿ ದಾಸೋಹ ಹಾಗೂ ಅನ್ನದಾಸೋಹದ ಮೂಲಕ ಸಾಯಿಬಾಬಾ ಅವರ ತತ್ವ ಸಂದೇಶಗಳನ್ನು ಸಮಾಜಕ್ಕೆ ತಲುಪಿಸುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ. ಡಾ. ಸಂಗಮನಾಥ ಶೆಟ್ಟರ ಅವರು ಸಂತಕವಿ ದಾಸಗಣು ಮಹಾರಾಜರ ಮರಾಠಿ ಕೃತಿಯನ್ನು ಕನ್ನಡಕ್ಕೆ ಅನುವಾದಿಸಿರುವುದು ಅಭಿನಂದನೀಯ ಕಾರ್ಯ ಎಂದರು.

ಗ್ರಂಥ ಪರಿಚಯಿಸಿದ ಡಾ. ಸಂಗಮನಾಥ ಶೆಟ್ಟರ, ಸಾಯಿಬಾಬಾ ಅವರ ತತ್ವಗಳಲ್ಲಿ ನಿಸ್ವಾರ್ಥ ಕರ್ತವ್ಯ, ದಾನ, ವಿನಯ ಹಾಗೂ ಆತ್ಮಶುದ್ಧಿಗೆ ವಿಶೇಷ ಮಹತ್ವ ನೀಡಲಾಗಿದೆ. ಭಕ್ತರ ಬೇಡಿಕೆಯ ಮೇರೆಗೆ ಪರಿಷ್ಕೃತ ದ್ವಿತೀಯ ಮುದ್ರಣವನ್ನು ದಾನಿಗಳ ಸಹಕಾರದಿಂದ ಪ್ರಕಟಿಸಲಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ದತ್ತಾ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಕಿರಣ ಪ್ರಕಾಶ ಭೂಮಾ ಮಾತನಾಡಿ, ಸಬ್ ಕಾ ಮಾಲಿಕ್ ಏಕ್ ಎಂಬ ಸಾಯಿಬಾಬಾ ಸಂದೇಶ ಇಂದಿಗೂ ಪ್ರಸ್ತುತವಾಗಿದ್ದು, ಜಾತಿ-ಧರ್ಮ ಭೇದ ಮರೆತು ಮಾನವೀಯತೆಯಿಂದ ಬದುಕಬೇಕು ಎಂದು ಹೇಳಿದರು.

**ಸಾಯಿಬಾಬಾ ಪವಾಡಗಳನ್ನು ಮಾತ್ರ ಮಾಡಲಿಲ್ಲ; ಮಾನವೀಯತೆ, ಭಕ್ತಿ ಮತ್ತು ಆದರ್ಶ ಜೀವನದ ಮಾರ್ಗವನ್ನೂ ತೋರಿಸಿದರು.**

**- ಪೂಜ್ಯ ಶಿವಶಾಂತವೀರ ಶರಣರು**

ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಸಮಿತಿಯ ಅಧ್ಯಕ್ಷ ಮಹೇಶಗೌಡ ತಲೆಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿ, ಭಕ್ತರ ಸಹಕಾರ ಹಾಗೂ ದಾನಿಗಳ ಕೊಡುಗೆಯಿಂದ ಮಂದಿರದಲ್ಲಿ ಅನೇಕ ಧಾರ್ಮಿಕ ಹಾಗೂ ಸಮಾಜಮುಖಿ ಕಾರ್ಯಗಳು ಯಶಸ್ವಿಯಾಗಿ ನಡೆಯುತ್ತಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀಮತಿ ಸುಶೀಲಾ ಗಂಗಣ್ಣ ಕೋಟಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ದಾನಿಗಳು, ಸೇವಾಕರ್ತರು ಹಾಗೂ ಗಣ್ಯರನ್ನು ಸನ್ಮಾನಿಸಲಾಯಿತು. ಕುಮಾರಿ ಕ್ಷೀತಿ ಅಶ್ವಥ್ ಸುಲಾಖೆ ಪ್ರಾರ್ಥಿಸಿದರು. ಡಾ. ಎಸ್.ಡಿ. ಯರಗೇರಿ ಕಾರ್ಯಕ್ರಮ ನಿರೂಪಿಸಿ, ಅಮೃತ ವಾಲಿ ವಂದಿಸಿದರು. ಅಪಾರ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದರು.

# ಮಳೆಗಾಗಿ ಇಂದು ಪರ್ಜನ್ಯ ಹೋಮ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನಲ್ಲಿ ಈ ಬಾರಿ ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ, ರೈತರ ಹಿತ ಹಾಗೂ ಉತ್ತಮ ಮಳೆಯಾಗುವಂತೆ ಪ್ರಾರ್ಥಿಸಿ ಹಗರಿಬೊಮ್ಮನಹಳ್ಳಿ ಆಹಾರಧಾನ್ಯ ವರ್ತಕರ ಸಂಘದ ವತಿಯಿಂದ ಜುಲೈ 30ರಂದು ಗುರುವಾರ ಪರ್ಜನ್ಯ ಹೋಮ ಹಾಗೂ ಮಹಾಪೂಜೆ ಆಯೋಜಿಸಲಾಗಿದೆ.

ಈ ಕುರಿತು ಸಂಘದ ಅಧ್ಯಕ್ಷ ಅಂಬಾಡಿ ಮಹೇಶ್ ಮಾಹಿತಿ ನೀಡಿ, ಭಾರತೀಯ ಸನಾತನ ಸಂಸ್ಕೃತಿಯಲ್ಲಿ ಯಜ್ಞ, ಹೋಮ ಹಾಗೂ ಹವನಗಳಿಗೆ ವಿಶೇಷ ಮಹತ್ವವಿದೆ. ಈ ಬಾರಿ ಎಲ್‌ನಿನೊ ಪರಿಣಾಮದಿಂದ ಸಮರ್ಪಕ ಮಳೆಯಾಗದೆ ರೈತರು ಸಂಕಷ್ಟ ಎದುರಿಸುತ್ತಿರುವ ಹಿನ್ನೆಲೆಯಲ್ಲಿ ವರುಣ ದೇವರ ಕೃಪೆಗೆ ಪಾತ್ರರಾಗಲು ಪರ್ಜನ್ಯ ಹೋಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜುಲೈ 30ರಂದು ಬೆಳಿಗ್ಗೆ 7 ಗಂಟೆಯಿಂದ ಹಗರಿಬೊಮ್ಮನಹಳ್ಳಿ ಎಪಿಎಂಸಿ ಆವರಣದ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಪರ್ಜನ್ಯ ಹೋಮ ಹಾಗೂ ವಿಶೇಷ ಪೂಜೆ ನೆರವೇರಲಿದ್ದು, ನಂತರ ಮಧ್ಯಾಹ್ನ 1 ಗಂಟೆಗೆ ಮಹಾಪ್ರಸಾದ ವ್ಯವಸ್ಥೆ ಮಾಡಲಾಗಿದೆ.

ರೈತರು, ವರ್ತಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ವರುಣ ದೇವರಲ್ಲಿ ಉತ್ತಮ ಮಳೆಗಾಗಿ ಪ್ರಾರ್ಥಿಸುವಂತೆ ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.



**ಬೆಂಗಳೂರು: ಚಲಿಸುತ್ತಿದ್ದ ರೈಲಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದ ಯುವಕನ ಪ್ರಕರಣದಲ್ಲಿ ಬೆಚ್ಚಿಬೀಳಿಸುವ ಬೆಳವಣಿಗೆಯೊಂದು ಬೆಳಕಿಗೆ ಬಂದಿದೆ. ಮೃತನನ್ನು ಆಂಧ್ರ ಪ್ರದೇಶ ಮೂಲದ 28 ವರ್ಷದ ವಿಶ್ವನಾಥ್ ಎಂದು ಗುರುತಿಸಲಾಗಿದೆ.**

# ಬಣಜಿಗ ಸಮಾಜಕ್ಕೆ 2ಎ ಮೀಸಲಾತಿ ಜಾರಿಗೊಳಿಸಲು ಒತ್ತಾಯಿಸಿ ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಬಣಜಿಗ ಸಮಾಜ ಕ್ಷೇಮಾಭಿವೃದ್ಧಿ ಸಂಘ (ರಿ), ಬೆಂಗಳೂರು ವತಿಯಿಂದ ಬಣಜಿಗ ಸಮಾಜಕ್ಕೆ 2ಎ ಉದ್ಯೋಗ ಮೀಸಲಾತಿ ಜಾರಿಗೊಳಿಸುವಂತೆ ಆಗ್ರಹಿಸಿ, ಬುಧವಾರ ಗದಗ ಜಿಲ್ಲಾಧಿಕಾರಿ ಹಾಗೂ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಮತ್ತು ರಾಜ್ಯದ ಮುಖ್ಯ ಕಾರ್ಯದರ್ಶಿಗೆ ಮನವಿ ಸಲ್ಲಿಸಲಾಯಿತು.

ಹೈಕೋರ್ಟ್ ಆದೇಶದಂತೆ ಬಣಜಿಗ ಸಮಾಜವನ್ನು ಪ್ರವರ್ಗ ಬಿಡಿಯಿಂದ ಪ್ರವರ್ಗ



ಬಿಬಿಗೆ ವರ್ಗೀಕರಿಸಿ 2ಎ ಮೀಸಲಾತಿಯ ಸೌಲಭ್ಯ ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಸಮಾಜದ ಬಹುಕಾಲದ ಬೇಡಿಕೆಯನ್ನು ಸರ್ಕಾರ ತ್ವರಿತವಾಗಿ ಈಡೇರಿಸಿ, ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ನ್ಯಾಯಯುತ ಅವಕಾಶ ಒದಗಿಸಬೇಕೆಂದು ಮನವಿ ಮಾಡಲಾಗಿದೆ.

ಮನವಿಯನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹಾಗೂ ಗದಗ ತಹಸೀಲ್ದಾರರಿಗೆ ಸಲ್ಲಿಸಿ, ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಅಧ್ಯಕ್ಷ ಈಶಣ್ಣ ಮುನವಳ್ಳಿ, ತಾಲೂಕು ಅಧ್ಯಕ್ಷ ನಾಗೇಶಪ್ಪ ಸವಡಿ, ಮಾಜಿ ತಾಲೂಕು ಅಧ್ಯಕ್ಷ ರೇವಣಪ್ಪ ಯಳಮಲಿ, ರಾಜು ಕುರುಡಗಿ, ಬಿ.ಬಿ. ಅಸೂಟಿ, ಸುರೇಶ ನಿಲುಗಲ್, ವಿರೂಪಾಕ್ಷಪ್ಪ ಅಕ್ಕಿ, ಚನ್ನವೀರಪ್ಪ ದುಂದುರ, ಬಸವರಾಜ ರಾಮನಕೊಪ್ಪ, ಶಿವಲೀಲಾ ಅಕ್ಕಿ, ಲಲಿತಾ ಇಂಗಳಳ್ಳಿ, ವೀರಣ್ಣ ಗಡಗಿ, ಸುರೇಶ ಮಾಳವಾಡ, ಎಸ್.ವಿ. ಮೆಣಸಿನಕಾಯಿ, ಎಸ್.ಎಂ. ಅಗಡಿ, ಚೇತನ ಅಂಗಡಿ, ಸುರೇಶ ಅಚ್ಚಳ್ಳಿ, ರವಿ ಪಟ್ಟಣಶೆಟ್ಟರ, ಮಾಂತೇಶ ರಾಮನಕೊಪ್ಪ, ಶಿದ್ದಲಿಂಗಪ್ಪ ಅರಳಿ, ಅಶೋಕ ಅಂಗಡಿ, ಸಂಗಪ್ಪ ಯಳಮಲಿ, ಬಸೆಟ್ಟೆಪ್ಪ ಅಚ್ಚಳ್ಳಿ, ಕೂಡ್ಲೆಪ್ಪ ಅಂಗಡಿ ಸೇರಿದಂತೆ ಜಿಲ್ಲಾ, ತಾಲೂಕು, ಗ್ರಾಮ, ಮಹಿಳಾ ಹಾಗೂ ಯುವ ಘಟಕಗಳ ಪದಾಧಿಕಾರಿಗಳು ಮತ್ತು ಸಮಾಜದ ಗಣ್ಯರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka